MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 329 | ಮಂಗಳವಾರ : 21-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 329 | TUESDAY : 21-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಚಿತ್ತಾಪುರದಲ್ಲಿ ಪಥಸಂಚಲನಕ್ಕೆ ಅನುಮತಿಗಾಗಿ ಆರ್‌ಎಸ್‌ಎಸ್ ಮರು ಅರ್ಜಿ

**ಕಲಬುರಗಿ, ಅ.20–** ಹೈಕೋರ್ಟ್ ಆದೇಶದ ಬಳಿಕ ಕಲಬುರಗಿ ಜಿಲ್ಲೆಯ ಚಿತ್ತಾಪುರದಲ್ಲಿ ನವೆಂಬರ್ 2 ರಂದು ಪಥ ಸಂಚಲನ ನಡೆಸಲು ಅನುಮತಿಗಾಗಿ ಆರ್‌ಎಸ್‌ಎಸ್ ಮರು ಅರ್ಜಿ ಸಲ್ಲಿಸಿದೆ. ಆರ್‌ಎಸ್‌ಎಸ್‌ನ ಕಲಬುರಗಿ ಜಿಲ್ಲಾ ಸಂಚಾಲಕ ಅಶೋಕ್ ಪಾಟೀಲ್ ಎಂಬುವವರು ಕಲಬುರಗಿ ಜಿಲ್ಲಾಧಿಕಾರಿಗಳ, ಎರಡು ಅಧಿಕೃತ ಇ–ಮೇಲ್ ವಿಳಾಸ ಮತ್ತು ವಾಟ್ಸಾಪ್‌ಗೆ ಅರ್ಜಿಯನ್ನು ರವಾನಿಸಿದ್ದು, ಪಥ ಸಂಚಲನಕ್ಕೆ ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದ್ದಾರೆ.

ನಿನ್ನೆ ಚಿತ್ತಾಪುರದಲ್ಲಿ ನಡೆಯಬೇಕಿದ್ದ ಪಥ ಸಂಚಲನಕ್ಕೆ ತಹಶೀಲ್ದಾರ್ ಅವರು ಕಡಿವಾಣ ಹಾಕಿದ್ದರು. ಅದನ್ನು ಆರ್‌ಎಸ್‌ಎಸ್ ಹೈಕೋರ್ಟ್‌ನಲ್ಲಿ ಪ್ರಶ್ನಿಸಿತ್ತು. ಕಲಬುರಗಿ ವಿಭಾಗದ ಹೈಕೋರ್ಟ್ ಪೀಠ, ತುರ್ತು ವಿಚಾರಣೆ ನಡೆಸಿ ನವೆಂಬರ್ 2ರಂದು ಪಥ ಸಂಚಲನಕ್ಕೆ ಅವಕಾಶ ನೀಡುವ ಬಗ್ಗೆ ಪರಿಶೀಲಿಸುವಂತೆ ಸರ್ಕಾರಕ್ಕೆ ಆದೇಶಿಸಿತ್ತು. ಜೊತೆಗೆ ಅನುಮತಿಗಾಗಿ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಆರ್‌ಎಸ್‌ಎಸ್‌ಗೆ ಸೂಚನೆ ನೀಡಿತ್ತು. ಅದನ್ನು ಆಧರಿಸಿ, ಅಶೋಕ್ ಪಾಟೀಲ್ ಅವರು ಮರು ಅರ್ಜಿ ಸಲ್ಲಿಸಿದ್ದಾರೆ.

ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ತಾವು ಮನವಿ ಸಲ್ಲಿಸಲು ಜಿಲ್ಲಾಧಿಕಾರಿಗಳ ಅಧಿಕೃತ ನಿವಾಸಕ್ಕೆ ಭೇಟಿ ನೀಡಿದ್ದು, ಅಲ್ಲಿ ನಮನ್ನು ಒಳಗೆ ಬಿಡಲಿಲ್ಲ. ಆಪ್ತ ಸಹಾಯಕರಿಗೆ ಅರ್ಜಿ ಸಲ್ಲಿಸಲು ಸೂಚನೆ ನೀಡಲಾಗಿತ್ತು. ಆದರೆ ಜಿಲ್ಲಾಧಿಕಾರಿಗಳ ಆಪ್ತ ಸಹಾಯಕರು ಕರೆ ಸ್ವೀಕರಿಸಲಿಲ್ಲ, ಹೀಗಾಗಿ ಇ–ಮೇಲ್ ಮೂಲಕ ಅರ್ಜಿ ಸಲ್ಲಿಸುತ್ತಿದ್ದೇವೆ. ವಾಟ್ಸಾಪ್ ಮೂಲಕವೂ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

ಹೈಕೋರ್ಟ್ ಅದೇಶದ ಹಿನ್ನೆಲೆಯಲ್ಲಿ ಮತ್ತೊಂದು ಸುತ್ತಿನ ಸಂಘರ್ಷಕ್ಕೆ ಆರ್‌ಎಸ್‌ಎಸ್ ಮುಂದಾಗಿದೆ. ಅಕ್ಟೋಬರ್ 19ರಂದು ಚಿತ್ತಾಪುರದಲ್ಲಿ ಪಥ ಸಂಚಲನ ನಡೆಸಲು ಅನುಮತಿ ನೀಡುವಂತೆ ಈ ಮೊದಲು ಅಕ್ಟೋಬರ್ 13 ರಂದು ಅಶೋಕ್ ಪಾಟೀಲ್ ಅವರು ಚಿತ್ತಾಪುರ ಪುರಸಭೆ




ಮುಖ್ಯಾಧಿಕಾರಿಗಳಿಗೆ ಅರ್ಜಿ ಸಲ್ಲಿಸಿದ್ದರು.

ಈ ವೇಳೆ ಚಿತ್ತಾಪುರ ಎಪಿಎಂಸಿ ಯಾರ್ಡ್ ಮತ್ತು ಬಸ್ ನಿಲ್ದಾಣದ ಎದರುಗಡೆಯಿಂದ ಪಥ ಸಂಚಲನ ಆರಂಭಗೊಂಡು ಅಂಬೇಡ್ಕರ್ ವೃತ್ತ, ಭುವನೇಶ್ವರಿ ವೃತ್ತ, ಪಾಲಪ್‌ಗಲ್ಲಿ, ಹೋಳಿಕಟ್ಟಿ, ಬಸವೇಶ್ವರ ಚೌಕ, ಹಳೇ ಕಪಡ ಬಜಾರ್ ವೃತ್ತ, ಜನತಾಚೌಕ್, ನಾಗಾವಿಚೌಕ್‌ನಿಂದ ನಂದಕಿಶೋರ್ ಬಜಾಜ್ ಮನೆ ಎದರುಗಡೆ ತಿರುಗಿ ಸೇವಾಲಾಲ್ ಚೌಕ್ ಪುರಸಭೆ ಕಾರ್ಯಾಲಯ ಮುಂಭಾಗ ಹಳೆ ಗಂಜ್ ವೃತ್ತ, ಕಾಶೀಗಲ್ಲಿ, ಗಣೇಶ ಮಂದಿರ ಮೂಲಕ ಬಜಾಜ್ ಕಲ್ಯಾಣ ಮಂಟಪ ತಲುಪಿ ಸಾರ್ವಜನಿಕ ಸಮಾರಂಭ ಆಯೋಜಿಸಿರುವುದಾಗಿ ತಿಳಿಸಲಾಗಿತ್ತು. ಈ ಮಾರ್ಗಗಳಲ್ಲಿ ಸ್ವಚ್ಛ ಮಾಡಿಕೊಡಬೇಕು ಹಾಗೂ ಬ್ಯಾನರ್ ಬಟಿಂಗ್‌ಗಳನ್ನು ಕಟ್ಟಲು ಅವಕಾಶ ನೀಡಬೇಕು ಎಂದು ಕೋರಲಾಗಿತ್ತು.

ಚಿತ್ತಾಪುರ ತಹಶೀಲ್ದಾರ್ ಅವರು ಪಥ ಸಂಚಲನ ನಡೆಸುವ ಉದ್ದೇಶ, ಭಾಗವಹಿಸುವವರ ಹೆಸರು ಮತ್ತು ಈ ಸಂದರ್ಭದಲ್ಲಿ ಕಾನೂನು ಸುವ್ಯಸ್ಥೆಗೆ ಧಕ್ಕೆಯಾದರೆ ಅದರ ಜವಬ್ದಾರಿ ಹೊರುವ ಹೊಣೆಗಾರಿಕಾ ಪ್ರಮಾಣ ಪತ್ರ ಮತ್ತು ಪಥ ಸಂಚಲನ ಆಯೋಜಿಸುವ ಸಂಸ್ಥೆಯ ನೋಂದಣಿ ದಾಖಲಾತಿ ಪತ್ರಗಳನ್ನು ಒದಗಿಸುವಂತೆ ಸೂಚಿಸಿದರು.

ಅದ್ಯಾವುದನ್ನು ನೀಡದ ಕಾರಣ ತಹಶೀಲ್ದಾರ್ ನಾಗಯ್ಯ ಹಿರೇಮಠ್ ಪಥ ಸಂಚಲನಕ್ಕೆ ಅನುಮತಿಯನ್ನು ನಿರಾಕರಿಸಿದರು. ಹೈಕೋರ್ಟ್‌ನಲ್ಲಿ ವಾದ–ವಿವಾದದ ಬಳಿಕ ಎರಡನೇ ಅರ್ಜಿ ಸಲ್ಲಿಕೆಯಾಗಿದೆ. ನಿನ್ನೆ ಸಚಿವ ಪ್ರಿಯಾಂಕ ಖರ್ಗೆ ಸುದ್ದಿಗಾರರೊಂದಿಗೆ ಮಾತನಾಡುವ ವೇಳೆ ಆರ್‌ಎಸ್‌ಎಸ್ ಮತ್ತೊಮ್ಮೆ ಅರ್ಜಿ ಸಲ್ಲಿಸಿ(2ನೇಪುಟಕ್ಕೆ)

## ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ನಿರ್ಬಂಧ : ಸರ್ಕಾರದ ವಿರುದ್ಧ ಶೆಟ್ಟರ್ ವಾಗ್ದಾಳಿ

**ಧಾರವಾಡ,ಅ.20–** ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ಕೇಂದ್ರ ಸರ್ಕಾರವೇ ಅನುಮತಿ ನೀಡಿರುವಾಗ ರಾಜ್ಯ ಸರ್ಕಾರ ಅದಕ್ಕೆ ನಿರ್ಬಂಧ ಹಾಕುವುದು ಎಷ್ಟರಮಟ್ಟಿಗೆ ಸರಿ

ಎಂದು ಸಂಸದ ಜಗದೀಶ್‌ಶೆಟ್ಟರ್ ಪ್ರಶ್ನಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ 66 ವರ್ಷಗಳ ಹಿಂದೆ ಹಾಕಿದ್ದ ನಿರ್ಬಂಧವನ್ನು ಕೇಂದ್ರ ಗೃಹ ಇಲಾಖೆ ತೆಗೆದು ಹಾಕಿದೆ. ಆರ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಸರ್ಕಾರಿ ನೌಕರರು ಭಾಗವಹಿಸಲು ಅವಕಾಶವಿದೆ. ಪಿಡಿಒ ಅಮಾನತು ಸರಿಯಲ್ಲ ಎಂದು ಆಕ್ಷೇಪಿಸಿದರು.

1966ರಲ್ಲಿ ನೆಹರು ಅವರು ಆರ್‌ಎಸ್‌ಎಸ್ ಮತ್ತು ಇಸ್ಲಾಂ ಚಟುವಟಿಕೆಗಳಲ್ಲಿ ಸರ್ಕಾರಿ ನೌಕರರು ಭಾಗವಹಿಸಬಾರದು ಅಂತಾ ಆದೇಶ ಮಾಡಿದ್ದರು. 1970ರಲ್ಲಿ ಅದು ಕೊಂಚ ತಿದ್ದುಪಡಿಯಾಗಿದ್ದು, 1980ರಲ್ಲಿ ಮತ್ತೊಮ್ಮೆ ತಿದ್ದುಪಡಿ ಮಾಡಲಾಗಿದೆ. ಮೋದಿ ಪ್ರಧಾನಿ ಅವರು ಜು. 9, 2024ರಲ್ಲಿ ಸಂಘದ ಚಟುವಟಿಕೆ ಮಾಡುವ ಬಗ್ಗೆ ಮತ್ತೊಂದು ಆದೇಶ ಮಾಡಿದ್ದಾರೆ. ಅದರಲ್ಲಿ ಹಿಂದಿನ ಆದೇಶದಲ್ಲಿದ್ದ ಆರ್‌ಎಸ್‌ಎಸ್ ಹೆಸರನ್ನು ತೆಗೆಯಲಾಗಿದೆ. ಈ ಬಗ್ಗೆ ಪ್ರಧಾನಿ ಕಚೇರಿಯಿಂದ ಆದೇಶವಾಗಿದೆ ಎಂದರು.

ಸಂಘದ ಚಟುವಟಿಕೆಯಲ್ಲಿ ಸರ್ಕಾರಿ ನೌಕರರು ಭಾಗವಹಿಸಲು ತೊಂದರೆ ಇಲ್ಲ. ಹೀಗಾಗಿ ರಾಜ್ಯ ಸರ್ಕಾರ ಈ ರೀತಿ ಆದೇಶಿಸಲು ಅಧಿಕಾರವಿಲ್ಲ. ಲಿಂಗಸೂರಿನಲ್ಲಿ ಪಿಡಿಒರನ್ನು ಅಮಾನತು ಮಾಡಿರುವುದು ಕಾನೂನು ಬಾಹಿರ. ಈ ಆದೇಶದ ಪ್ರಕಾರ ಅಮಾನತು ಮಾಡುವಂತಿಲ್ಲ. ಕೂಡಲೇ ಅಮಾನತು ಆದೇಶವನ್ನು ಹಿಂಪಡೆಯಬೇಕು. ಕೋರ್ಟ್‌ಗೆ ಹೋದರೆ ಸರ್ಕಾರದ ಆದೇಶ ವಜಾ ಆಗುತ್ತದೆ ಎಂದರು.

ಆರ್‌ಎಸ್‌ಎಸ್ ವಿಚಾರದಲ್ಲಿ ತಮ ಮೇಲಿನ ಸಿಎಂ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 2013ರಲ್ಲಿ ಬಿಜೆಪಿಯೇ ಈ ಆದೇಶ ಮಾಡಿತ್ತು



ಅಂತಾರೆ. ನಾನು ಸಿಎಂ ಇದ್ದಾಗಿನ ಆದೇಶವನ್ನೆ? ಮುಂದುವರೆಸಿರುವುದಾಗಿ ಹೇಳುತ್ತಾರೆ. ಅವತ್ತು ಆಗಿದ್ದ ಆದೇಶವನ್ನು ಸರಿಯಾಗಿ ಅವರು ಓದಿದ್ದಾರಾ?. ಆದೇಶದಲ್ಲಿ ಎಲ್ಲಿಯೂ ಆರ್‌ಎಸ್‌ಎಸ್ ಪದ ಬಳಸಿಲ್ಲ. ನಮ ಕ್ಯಾಬಿನೆಟ್ ಸಭೆಯಲ್ಲಿ ಮಾಡಿದ್ದ ಆದೇಶವಲ್ಲ. ಯಾವುದೋ ಒಂದು ಕಾರ್ಯಕ್ರಮಕ್ಕೆ ಶಿಕ್ಷಣ ಇಲಾಖೆ ಜಾಗ ಕೇಳಿದ್ದರು. ಶಿಕ್ಷಣ ಇಲಾಖೆ ಜಾಗದಲ್ಲಿ ಖಾಸಗಿ ಕಾರ್ಯಕ್ರಮಕ್ಕೆ ಅವಕಾಶವಿಲ್ಲ ಎಂದು ಆಗ ಶಿಕ್ಷಣ ಇಲಾಖೆ ಅಧಿಕಾರಿಗಳು ಡಿಡಿಪಿಐಗೆ ಬರೆದಿರುವ ಆದೇಶವದು. ಇನ್ನಾದರು ನಾಟಕ ಮಾಡೋದನ್ನು ಬಿಡಿ ಎಂದು ವಾಗ್ದಾಳಿ ಮಾಡಿದರು.

ಚಿತ್ತಾಪುರ ಘಟನೆ: ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ ಪಡೆಯುವ ಚಿತ್ತಾಪುರದ ಘಟನೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಸಿಎಂ ಸಿದ್ದರಾಮಯ್ಯ, ಪ್ರಿಯಾಂಕ್ ಖರ್ಗೆಗೆ ಏನಾಗಿದೆಯೋ ಗೊತ್ತಿಲ್ಲ. ಸಿದ್ದು ಸರ್ಕಾರ ಆಡಳಿತದಲ್ಲಿ ವಿಫಲವಾಗಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಚಿತ್ತಾಪುರ ಪಥಸಂಚಲನದಲ್ಲಿ ಸಾವಿರಾರು ಯುವಕರು ಭಾಗವಹಿಸುತ್ತಿದ್ದಾರೆ.(2ನೇಪುಟಕ್ಕೆ)

## ಮಹಿಳೆಯರು ಅಧಿಕ ಆದಾಯದ ಸಣ್ಣ ಪ್ರಮಾಣದ ಚಟುವಟಿಕೆಗಳನ್ನು ಕೈಗೊಳ್ಳಬೇಕು: ಎಸ್.ಎನ್.ಮಂಜುನಾಥ

**ಬಳ್ಳಾರಿ,ಅ.20–** ಮಹಿಳೆಯರು ಅಧಿಕ ಆದಾಯವನ್ನು ಗಳಿಸುವಂತಹ ಸಣ್ಣ ಪ್ರಮಾಣದ ಚಟುವಟಿಕೆಗಳನ್ನು ಮಹಿಳಾ ಸ್ವಸಹಾಯ ಸಂಘಗಳು ಕೈಗೊಳ್ಳಬೇಕು. ಕೇವಲ ಕೃಷಿ ಇಲಾಖೆ ಅಲ್ಲದೇ, ಮೀನುಗಾರಿಕೆ, ತೋಟಗಾರಿಕಾ ಇಲಾಖೆಯಲ್ಲೂ ಸಹ ಗುಂಪುಗಾರಿಕೆಗೆ ಅವಕಾಶವಿದ್ದು, ತಾವೆಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಉಪ ಕೃಷಿ ನಿರ್ದೇಶಕ ಎಸ್ ಎನ್ ಮಂಜುನಾಥ ಅವರು ಹೇಳಿದರು.

ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ಮಹಿಳಾ ಕಿಸಾನ್ ದಿವಸ್ ಅಂಗವಾಗಿ ಬಳ್ಳಾರಿ ಹಾಗೂ ಕುರುಗೋಡು ತಾಲ್ಲೂಕಿನ ಮಹಿಳಾ ಸ್ವಸಹಾಯ ಗುಂಪುಗಳಿಗೆ ಕೌಶಲ್ಯಾಭಿವೃದ್ಧಿ ಹಾಗೂ ಬಲವರ್ಧನೆ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಹಿಳೆಯರು ಸಣ್ಣ ಒಕ್ಕೂಟಗಳನ್ನು ಮಾಡಿಕೊಂಡು ಕೃಷಿ ಇಲಾಖೆಯಡಿ ದೊರೆಯುವ ಪಿ.ಎಮ್.ಎಫ್.ಎಂ.ಇ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು. ಕಾರ್ಯಕ್ರಮದಲ್ಲಿ ಪ್ರಾತ್ಯಕ್ಷಿಕೆ ಮುಖಾಂತರ ತೋರಿಸ ಲಾಗುತ್ತಿರುವ




ಜಾಮ್ ತಯಾರಿ ಹಾಗೂ ಕ್ರೋಶೆಟ್ ಚಟುವಟಿಕೆಯನ್ನು ಮುಂದಿನ ಒಂದು ವರ್ಷದೊಳಗೆ ಮಹಿಳಾ ಸ್ವಸಹಾಯ ಸಂಘಗಳು ಅಥವಾ ಕೃಷಿ ಸಖಿಯರು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮಹಿಳಾ ಸ್ವಸಹಾಯ ಸಂಘಗಳು ತಮ್ಮ ಉತ್ಪನ್ನಗಳನ್ನು ಬ್ರಾಂಡಿಂಗ್ ಮಾಡಿ ಮಾರಾಟ ಮಾಡಬೇಕು. ಒಳ್ಳೆಯ ಉತ್ಪನ್ನವನ್ನು ತಯಾರಿಸಿದಲ್ಲಿ, ಮಾರ್ಟ್ಗಳು ತಮ್ಮಲ್ಲಿಗೇ ಬಂದು ಖರೀದಿಸುತ್ತಾರೆ. ಇದರಿಂದ ತಮ್ಮ ಉತ್ಪನ್ನದ ಬೇಡಿಕೆ ಕೂಡ ಹೆಚ್ಚಾಗುತ್ತದೆ. ಕೃಷಿ ಸಖಿಯರು ಎಲ್ಲಾ ಇಲಾಖೆಗಳ ಸೌಲಭ್ಯಗಳನ್ನು ತಿಳಿದು ಮಹಿಳಾ ಸ್ವಸಹಾಯ ಸಂಘಗಳಿಗೆ ಹಾಗೂ ರೈತ ಶಕ್ತಿ ಗುಂಪುಗಳಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.(2ನೇಪುಟಕ್ಕೆ)

## ದೀಪಾವಳಿ ಅಂಗವಾಗಿ ಶ್ರೀರೇಣುಕಾ ಯಲ್ಲಮ್ಮ ದೇವಿ ಗಂಗೆ ಪೂಜೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.20–**ತಾಲೂಕಿನ ನೀರಮಾನ್ವಿ ಗ್ರಾಮದ ಶ್ರೀರೇಣುಕ ಯಲ್ಲಮ್ಮ ದೇವಸ್ಥಾನದಲ್ಲಿ ದಿಪಾವಳಿ ಪಾಡ್ಯ ಅಂಗವಾಗಿ ವಿಶೇಷವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲಾಯಿತು, ಪ್ರತಿವರ್ಷದಂತೆ ದಿಪಾವಳಿ ಹಬ್ಬದ ಅಂಗವಾಗಿ ಶ್ರೀ ರೇಣುಕ ಯಲ್ಲಮ್ಮದೇವಿಯ ಗಂಗೆ ಪೂಜೆ ಕಾರ್ಯಕ್ರಮ ಅಂಗವಾಗಿ ನೀರಮಾನ್ವಿ ಗ್ರಾಮದ ಶ್ರೀರೇಣುಕ ಯಲ್ಲಮ್ಮ ದೇವಸ್ಥಾನದಿಂದ ಪಲ್ಲಕ್ಕಿಯಲ್ಲಿ ಶ್ರೀ ರೇಣುಕ ಯಲ್ಲಮ್ಮ ದೇವಿಯ ಉತ್ಸವ ಮೂರ್ತಿಯನ್ನು ಕೂಡಿಸಿ ಮೆರವಣಿಗೆ ಮೂಲಕ ತಾಲೂಕಿನ ಜಾಗೀರ್ ಪನ್ನೂರು ಗ್ರಾಮದ ಹತ್ತಿರ ಹರಿಯುವ ತುಂಗಭದ್ರ ನದಿಯಲ್ಲಿ ಗಂಗೆ ಪೂಜೆ ಸಲ್ಲಿಸಿ ದೇವಸ್ಥಾನದ ಆರ್ಚಕರು ವಿಶೇಷ ಪೂಜೆಯನ್ನು ಸಲ್ಲಿಸಿ




ನಂತರ ಪಲ್ಲಕ್ಕಿಯನ್ನು ಹೊತ್ತು ಪಾದಯಾತ್ರೆ ಮೂಲಕ ನೀರಮಾನ್ವಿ ಗ್ರಾಮಕ್ಕೆ ಆಗಮಿಸಿದ ಶ್ರೀರೇಣುಕ ಯಲ್ಲಮ್ಮ ದೇವಿ ಯನ್ನು ಗ್ರಾಮಸ್ಥರು ಹಾಗೂ ಸಾವಿರಾರು ಭಕ್ತರು ಭಕ್ತಿ ಭಾವದಿಂದ ಬರಮಾಡಿಕೊಂಡರು.

ನೀರಮಾನ್ವಿ ಗ್ರಾಮದ ಶ್ರೀರೇಣುಕ ಯಲ್ಲಮ್ಮ ದೇವಸ್ಥಾನದಲ್ಲಿ ಪ್ರತಿ ವರ್ಷ ಕೂಡ ವೈಭವದಿಂದ ಜಾತ್ರಮಹೋತ್ಸವ ಹಾಗೂ ದೀಪಾವಳಿ ಪಾಡ್ಯ ಸಮಯದಲ್ಲಿ ನಡೆಯುವ ಗಂಗೆಪೂಜೆ ಕಾರ್ಯಕ್ರಮಕ್ಕೆ ಸಾವಿರಾರು ಭಕ್ತರು ಆಗಮಿಸಿ ಶ್ರೀ ರೇಣುಕ ಯಲ್ಲಮ್ಮದೇವಿಗೆ ಪೂಜೆ ಸಲ್ಲಿಸುತ್ತಾರೆ.

## ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಪೋತ್ನಾಳ್ ವತಿಯಿಂದ ಹೆಣ್ಣು ಮಕ್ಕಳ ದಿನಾಚರಣೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಅ.20–** ತಾಲೂಕಿನ ಪೋತ್ನಾಳ್ ಗ್ರಾಮದ ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಪೋತ್ನಾಳ್ ವಿಮುಕ್ತಿ ಸಭಾಂಗಣದಲ್ಲಿ ನಡೆದ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಪೋತ್ನಾಳ್ ನಿರ್ದೇಶಕರಾದ ಫಾ. ಸತೀಶ್ ಫೆರ್ನಾಂಡಿಸ್ ಮಾತನಾಡಿ ಪಾಲಕರು ಹೆಣ್ಣು ಮಕ್ಕಳ ಬಗ್ಗೆ ಇರುವ ಹಲವು ಮೌಢ್ಯ ವಿಚಾರಗಳನ್ನು ಬಿಟ್ಟು ಶಿಕ್ಷಣವನ್ನು ನೀಡುವುದಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡಬೇಕು ಹೆಣ್ಣು ಮಕ್ಕಳು ಕೂಡ ತಮ್ಮ ಮನೆಯಲ್ಲಿನ ಸೀಮಿತವಾದ ವಾತಾವರಣದಿಂದ ಹೊರ ಬಂದು ಸ್ವತಂತ್ರ ಆಲೋಚನಾ ಶಕ್ತಿಯನ್ನು ಬೆಳೆಸಿಕೊಂಡು ತಮ್ಮ ಹಕ್ಕುಗಳನ್ನು ಪಡೆದುಕೊಳ್ಳುವುದಕ್ಕೆ ಮುಂದಾಗಬೇಕು ಎಂದು ತಿಳಿಸಿದರು.




ಕರ್ನಾಟಕ ಕಪುಚಿನ್ ಪ್ರಾಂತ್ಯದ ಪ್ರಾಂತಿಯ ಅಧಿಕಾರಿ ಫಾ.ರಾಬಿನ್‌ವಿಕ್ಟರ್‌ಡಿಸೋಜ ಮಾತನಾಡಿ ನಮ್ಮ ದೇಶದಲ್ಲಿ ಸಂವಿಧಾನ ಜಾರಿಯಾದ ನಂತರ ಹೆಣ್ಣುಮಕ್ಕಳು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮುಂದುವರಿಯುವುದಕ್ಕೆ ಸಾಧ್ಯವಾಗಿದೆ ಪ್ರತಿಯೊಬ್ಬ ಹೆಣ್ಣು ಮಕ್ಕಳು ಕೂಡ ಉನ್ನತ ಶಿಕ್ಷಣವನ್ನು ಪಡೆದುಕೊಳ್ಳುವ ಮೂಲಕ ಸಮಾಜದಲ್ಲಿ ಉನ್ನತವಾದ ಸ್ಥಾನವನ್ನು ಪಡೆಯುವುದಕ್ಕೆ ಮುಂದಾಗಬೇಕು ಎಂದು ತಿಳಿಸಿದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಕ್ಕಳ ಹಕ್ಕುಗಳ ಕುರಿತಾಗಿ ಘೋಷಣೆಗಳನ್ನು ಕೂಗುತ್ತ ಜಾಗೃತಿ ಜಾಥಾ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ಕಪುಚಿನ್ ಪ್ರಾಂತ್ಯದ ಖಜಾಂಚಿಗಳಾದ(2ನೇಪುಟಕ್ಕೆ)

## ಸಾಮಾನ್ಯ ಜ್ಞಾನ ಇಲ್ಲದ ಶಾಸಕ ಮಾನಪ್ಪ ವಜ್ಜಲ್ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ : ಗೋವಿಂದ ನಾಯಕ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಅ.20–** ಬಿಜೆಪಿ ಪಕ್ಷದಲ್ಲಿದ್ದಾಗ ಶಾಸಕರ ಒತ್ತಾಯದ ಮೇರೆಗೆ ಅನಿವಾರ್ಯವಾಗಿ ನಾನು ಒಬ್ಬ ರಾಜಕಾಣಿಯಾಗಿ ಆರ್‌ಎಸ್‌ಎಸ್ ಸಮವಸ್ತ್ರ ಧರಿಸಿ ಫಥಸಂಚಲನದಲ್ಲಿ ಭಾಗವಹಿಸಿದ್ದೇನೆ ಹೊರತು ನಾನು ಸರ್ಕಾರಿ ನೌಕರನಲ್ಲ ನನ್ನ ವಿರುದ್ಧ ಕ್ರಮ ತೆಗೆದುಕೊಳ್ಳಲಿಕ್ಕೆ ಅಷ್ಟು ಸಾಮಾನ್ಯ ಜ್ಞಾನ ಇಲ್ಲದ ಶಾಸಕ ಮಾನಪ್ಪ ವಜ್ಜಲ್ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳರವರಿಗೆ ಬುದ್ಧಿ ಭ್ರಮಣೆಯಾಗಿರಬಹುದು ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದನಾಯಕ ಲೇವಡಿ ಮಾಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆರ್‌ಎಸ್‌ಎಸ್ ಯಾವುದೇ ಶಾಖೆಯಲ್ಲಿ ನಾನು ಭಾಗಿಯಾಗಿಲ್ಲ ಮತ್ತು ಆರ್‌ಎಸ್‌ಎಸ್ ಸದಸ್ಯನು ನಾನು ಅಲ್ಲ. ಆರ್‌ಎಸ್‌ಎಸ್‌ನಲ್ಲಿ ಭಾಗವಹಿಸಿದರೆ ಚುನಾವಣೆಯಲ್ಲಿ ಮತ ಪಡೆಯಬಹುದು ಎಂಬ ಉದ್ದೇಶಕ್ಕೆ ಅವರು ಆರ್‌ಎಸ್‌ಎಸ್ ಪಥಸಂಚಲನದಲ್ಲಿ




ಭಾಗಯಾಗುತ್ತಿದ್ದಾರೆ ಹೊರತು ಇನ್ನಾವುದಕ್ಕೂ ಅಲ್ಲ. ಪಿಡಿಓ ಪ್ರವೀಣ ಕುಮಾರ್ ಬುದ್ಧಿವಂತನಂದು ತಮ್ಮ ಆಪ್ತ ಸಹಾಯಕನನ್ನಾಗಿ ನೇಮಿಸಿಕೊಂಡಿದ್ದೇನೆ ಅದನ್ನು ಸಹಿಸಿದೇ ಕಾಂಗ್ರೆಸ್ ಪಕ್ಷದವರು ಅಮಾನತ್ತುಗೊಳಿಸಿದ್ದಾರೆ ಎಂದು ಹೇಳುವ ಶಾಸಕರು, ಈ ಹಿಂದೆ ಇದೆ ಪ್ರವೀಣಕುಮಾರ ಅಕ್ರಮ ಆಸ್ತಿ ಗಳಿಸಿದ್ದಾನೆಂದು ದೂರು ನೀಡಿರುವುದು ಜ್ಞಾನಪಕವಿಲ್ಲವೇ ಎಂದು ಪ್ರಶ್ನಿಸಿದರು.

ದೇವದುರ್ಗದ ಸಣ್ಣಪುಟ್ಟ ಗುತ್ತಿಗೆದಾರರಿಗೆ ತಮ್ಮ ಕಂಪನಿಯಿಂದ ಉಪ ಗುತ್ತಿಗೆ ನೀಡಿ ಕೆಲಸ ಮಾಡಿಸಿಕೊಂಡು ವರ್ಷಗಳು ಕಳೆದರು ಅವರ ಬಿಲ್ ಪಾವತಿ ಮಾಡದೇ ಅವರನ್ನು ಅಲೆದಾಡಿಸುವಂತೆ ಮಾಡಿದ ತಾವು ಮಾನವೀಯತೆಯನ್ನು ಮರೆತು ಬಿಟ್ಟಿರುವುದು ಸರಿಯೇ? ಇನ್ನು ತಮ್ಮ ಕನಸಿನ ಕೂಸು ಎಂದು ಬಿಂಬಿಸಿಕೊಂಡು ನಂದವಾಡಗಿ ಏತ ನೀರಾವರಿಯ ರೂವಾರಿ ಎಂದು ಕರೆಸಿಕೊಳ್ಳುವ ತಾವು ಆ ನೀರಾವರಿ ಕಾಮಗಾರಿ ಪೂರ್ಣಗೊಂಡಿದೆಯೇ, ಕಾಮಗಾರಿಯಿಂದ ಎಷ್ಟು ಜನ ರೈತರು ಭೂಮಿಗೆ ನೀರು ಒದಗಿಸಿದ್ದೀರಿ ಎಂಬು ವುದು ಈ (2ನೇಪುಟಕ್ಕೆ)

## ಮೊದಲನೇಯ ಪುಟದಿಂದ

# ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ನಿರ್ಬಂಧ : ಸರ್ಕಾರದ ವಿರುದ್ಧ ಶೆಟ್ಟರ್ ವಾಗ್ದಾಳಿ

ಹೀಗಾಗಿ ಇದರ ಜನಪ್ರಿಯತೆಯನ್ನು ಸಿಎಂಗೂ, ಪ್ರಿಯಾಂಕ್ ಖರ್ಗೆಗೆ ಸಹಿಸಲು ಆಗುತ್ತಿಲ್ಲ. ಇದೇ ಕಾರಣಕ್ಕೆ ಚಿತ್ತಾಪುರದಲ್ಲಿ ತಡೆಯುವ ಪ್ರಯತ್ನ ಮಾಡಿದ್ದಾರೆ ಎಂದು ದೂರಿದರು.

ರಾಜ್ಯದ ಆರ್ಥಿಕ ಪರಿಸ್ಥಿತಿ ಸರಿಯಿಲ್ಲ, ಗುತ್ತಿಗೆದಾರರು 33,000 ಕೋಟಿ ಬಿಲ್ ಬಾಕಿ ಇದೆ ಎನ್ನುತ್ತಿದ್ದಾರೆ. ಹಂತ ಹಂತವಾಗಿ ಕೊಡಬಹುದಿತ್ತು, ಅದನ್ನು ಕೊಡುವ ಕೆಲಸವೂ ಆಗುತ್ತಿಲ್ಲ. ಅವರು ಆತಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಇನ್ನೊಂದು ಕಡೆ ರೈತರು ಆತಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಅವರಿಗೆ ಪರಿಹಾರದ ಹಣ ಕೊಡುತ್ತಿಲ್ಲ. ಇಡೀ ಆಡಳಿತ ಕುಸಿದು ಹೋಗಿದೆ. ಹೀಗಾಗಿ ಜನರ ಮನಸ್ಸನ್ನು ಬೇರೆಡೆ ಸೆಳೆಯಲು ಒಂದೊಂದೇ ವಿಚಾರ ಹೊರಗೆ ಬಿಡುತ್ತಿದ್ದಾರೆ ಶೆಟ್ಟರ್ ಇದೇ ವೇಳೆ ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

# ಚಿತ್ತಾಪುರದಲ್ಲಿ ಪಥಸಂಚಲನಕ್ಕೆ ಅನುಮತಿಗಾಗಿ ಆರ್‌ಎಸ್‌ಎಸ್ ಮರು ಅರ್ಜಿ

ಷರತ್ತುಗಳನ್ನು ಪೂರೈಸಿದರೆ ಪಥ ಸಂಚಲನಕ್ಕೆ ಅನುಮತಿ ನೀಡುವ ಬಗ್ಗೆ ತಾಲ್ಲೂಕು ಆಡಳಿತ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು. ಹೈ ಕೋರ್ಟ್ ಆದೇಶದ ಬೆನ್ನಲ್ಲೆ ಆರ್‌ಎಸ್‌ಎಸ್ ಜಿಲ್ಲಾಡಳಿತಕ್ಕೆ ಅರ್ಜಿ ಸಲ್ಲಿಸಿದೆ.

ಈ ನಡುವೆ ನಿನ್ನೆ ಸೇಡಂನಲ್ಲಿ ನಡೆದ ಆರ್‌ಎಸ್‌ಎಸ್ ಪಥಸಂಚಲನದಲ್ಲಿ ತಾಲ್ಲೂಕು ಆಡಳಿತ ವೈದ್ಯಾಧಿಕಾರಿ ನಾಗರಾಜು ಅವರು, ಗಣವೇಷ ಧರಿಸಿ ಭಾಗವಹಿಸಿದ್ದರು. ಕೆಸಿಎಸ್‌ಆರ್ ನಿಯಮದ ಪ್ರಕಾರ ಸರ್ಕಾರಿ ನೌಕರರು ಸಂಘ ಸಂಸ್ಥೆಗಳ ಚಟುವಟಿಕೆಗಳಲ್ಲಿ ಭಾಗವಹಿಸುವಂತಿಲ್ಲ ಎಂಬ ನಿಬಂಧನೆಯಿದೆ.

ಈ ಮೊದಲು ನಡೆದಿದ್ದ ಪಥ ಸಂಚಲನದಲ್ಲಿ ಭಾಗವಹಿಸಿದ್ದರು ಎಂಬ ಕಾರಣಕ್ಕಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಿಡಿಓ ಅವರನ್ನು ಅಮಾನತು ಗೊಳಿಸಲಾಗಿತ್ತು. ಅದರ ಬಳಿಕವೂ ತಾಲ್ಲೂಕು ವೈದ್ಯಾಧಿಕಾರಿ ಅವರು ಪಥ ಸಂಚಲನದಲ್ಲಿ ಭಾಗವಹಿಸಿ ಸರ್ಕಾರಕ್ಕೆ ಸೆಡ್ಡು ಹೊಡೆದಿದ್ದಾರೆ.ನಿನ್ನೆಯ ಸೇಡಂ ಪಥ ಸಂಚಲನದಲ್ಲಿ ಕೆಲ ಕಾಂಗ್ರೆಸ್ ಕಾರ್ಯಕರ್ತರೂ ಭಾಗವಹಿಸಿದ್ದರು ಎಂದು ಹೇಳಲಾಗುತ್ತಿದೆ.

# ಮಹಿಳೆಯರು ಅಧಿಕ ಆದಾಯದ ಸಣ್ಣ ಪ್ರಮಾಣದ ಚಟುವಟಿಕೆಗಳನ್ನು ಕೈಗೊಳ್ಳಬೇಕು: ಎಸ್.ಎನ್.ಮಂಜುನಾಥ

ಸಹಾಯಕ ಕೃಷಿ ನಿರ್ದೇಶಕರಾದ ನದಾಫ್ ಅವರು ಮಾತನಾಡಿ, ರೈತ ಮಹಿಳೆಯರು ಕೇವಲ ಮನೆಕೆಲಸಕ್ಕಷ್ಟೇ ಸೀಮಿತವಾಗದೆ, ಮನೆಯ ಖರ್ಚನ್ನು ಭರಿಸುವ ಸಣ್ಣ ಉದ್ಯಮಗಳಾದ ಹಸಿಮೆಣಸಿನ ಪುಡಿ, ಅಗಸೆ ಪುಡಿ, ಗುಲಾಬ್ ಜಾಮೂನ್ ಪುಡಿ, ಮಿಕ್ಷಣ್ಣಿನ ಜಾಮ್ ಇನ್ನೂ ಮುಂತಾದವುಗಳನ್ನು ಒಂದು ಬ್ರಾಂಡ್ ಹೆಸರನ್ನು ನೀಡಿ ತಮ್ಮ ಹಳ್ಳಿಗಳಲ್ಲಿ ಅಥವಾ ತಾಲೂಕಿನ ಮಳಿಗೆಗಳಲ್ಲಿ ಮಾರಬಹುದು. ಇದರಿಂದ ಮಹಿಳೆಯರು ಉಳಿತಾಯದ ಮನೋಭಾವವನ್ನು ಬೆಳೆಸಿಕೊಂಡು ಅಧಿಕ ಲಾಭವನ್ನು ಗಳಿಸಿ ಆರ್ಥಿಕವಾಗಿ ಸಶಕ್ತರಾಗಬೇಕೆಂದು ಮಹಿಳೆಯರಿಗೆ ಹುಮ್ಮಸ್ಸು ನೀಡಿದರು.

ಬಳಿಕ ಮಹೇಶ್ವರಿ ಅವರು ಕಾರ್ಯಕ್ರಮದಲ್ಲಿ ಸುಮಾರು ಎರಡು ಗಂಟೆಗಳ ಕಾಲ ಮಹಿಳಾ ಸ್ವಸಹಾಯ ಗುಂಪುಗಳಿಗೆ ಹಾಗೂ ಕೃಷಿ ಸಖಿಯರಿಗೆ ಸೀರೆಗಳಿಗೆ ಕ್ರೋಶೆಟ್ ಕೆಲಸ (ಕೊಂಬೆ ಹೆಣಿಗೆ) ಹಾಗೂ ವೇಸ್ಟ್ ಬಟ್ಟೆಗಳಿಂದ ಮ್ಯಾಟ್ ತಯಾರಿಸುವುದರ ಬಗ್ಗೆ ಪ್ರಾತ್ಯಕ್ಷಿಕೆಯ ಮುಖಾಂತರ ತರಬೇತಿಯನ್ನು ನೀಡಿದರು. ಸುಮಂಗಲ ಅವರು ವಿವಿಧ ಬಗೆಯ ಹಣ್ಣುಗಳಿಂದ ಸೇಬು, ಬಾಳೆಹಣ್ಣು, ಕಿತ್ತಳೆ, ಕರಿದ್ರಾಕ್ಷಿ, ಸಪೋಟ ಮಿಕ್ಷಣ್ಣಿನ ಜಾಮ್ ತಯಾರಿಸುವುದನ್ನು ತಿಳಿಸಿ ಎಲ್ಲರಿಗೂ ಸವಿಯಲು ನೀಡಿದರು.

ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಕವಿತಾ, ಕೃಷಿ ಅಧಿಕಾರಿಗಳಾದ ಸೌಮ್ಯ, ರೇಖಾ, ಜ್ಯೋತಿ, ಗಾಯಿತ್ರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಅರುಣಾ, ಸುಷ್ಮ, ಆತ್ಮ ಯೋಜನೆಯ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರಾದ ವಾಣಿ ಕೋರಪ್ಪಳ, ಸಹಾಯಕ ತಾಂತ್ರಿಕ ವ್ಯವಸ್ಥಾಪಕರಾದ ಶಿಲ್ಪಾ ಸೇರಿದಂತೆ ಸ್ವ–ಸಹಾಯ ಗುಂಪಿನ ಸದಸ್ಯರು ಹಾಗೂ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

# ಸಾಮಾನ್ಯ ಜ್ಞಾನ ಇಲ್ಲದ ಶಾಸಕ ಮಾನಪ್ಪ ವಜ್ಜಲ್ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ : ಗೋವಿಂದ ನಾಯಕ

ಕ್ಷೇತ್ರದ ಜನತೆಗೆ ತಿಳಿದಿದೆ. ಕಾಂಗ್ರೆಸ್ ಪಕ್ಷವನ್ನು ಟೀಕಿಸುವುದೇ ನಿಮ್ಮ ಕೆಲಸವಾಗಿದೆ ಹೊರತು ಈ ಕ್ಷೇತ್ರದ ಅಭಿವೃದ್ಧಿ ಎಂದಾದರೂ ಯೋಚನೆ ಮಾಡಿದ್ದೀರಾ, ಶಾಸಕರಾಗಿ ಕಳೆದ 2 ವರ್ಷಗಳಲ್ಲಿ ಎಷ್ಟು ಗ್ರಾಮಗಳಿಗೆ ಭೇಟಿ ನೀಡಿ ಕ್ಷೇತ್ರದ ಜನತೆಯ ಸಮಸ್ಯೆಯನ್ನು ಪರಿಹರಿಸಿದ್ದೀರೆಂದು ತಿಳಿಸಿ ಎಂದು ಖಾರವಾಗಿ ನುಡಿದರು.

ಕೆಕೆಆರ್‌ಡಿಬಿಯಿಂದ ಬಂದು ಅನುದಾನದಡಿ ನಡೆಯುತ್ತಿರುವ ಕಾಮಗಾರಿಗಳ ಗುಣಮಟ್ಟ ಹೇಗಿದೆ ಎನ್ನುವುದು ಜನರಿಗೆ ಗೊತ್ತಿದೆ. ಮೂಲತ ಕಾಂಗ್ರೆಸ್ ಪಕ್ಷದ ಕಾರ್ಯಕರ್ತನಾಗಿದ್ದ ನಾನು ರಾಜಕೀಯ ಬೆಳವಣಿಗೆಯಲ್ಲಿ ನಿಮ್ಮ ಕಡೆ ಬಂದಿದ್ದೆ. ನಿಮ್ಮಲ್ಲಿ ಸಾಮಾಜಿಕ ನ್ಯಾಯದಡಿ ಬೆಲೆ ಇಲ್ಲವೆಂದು ಅರಿತು ಪುನಃ ಕಾಂಗ್ರೆಸ್ ಪಕ್ಷವನ್ನೇ ಸೇರ್ಪಡೆಯಾಗಿದ್ದೇನೆ. ವಿನಾಕಾರಣ ಆರೋಪ ಮಾಡಿ ಜನರ ದಿಕ್ಕು ತಪ್ಪಿಸುವ ಬದಲು, ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದರೆ ನಮ್ಮದೂ ಸಹಕಾರ ಇರುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಅಮರೇಶ ಚಿಕ್ಕಹೆಸರೂರು, ಮಹಮ್ಮದ್ ರಫಿ, ಮುದಕಪ್ಪ ವಕೀಲರು, ಉಮೇಶ ಹುನಕುಂಟಿ, ಸಂಜೀವಪ್ಪ ಚಲುವಾದಿ, ಜೀವನ ಬಾಳೇಗೌಡ, ಸಂತೋಷ ಸೋಪಿಮಠ, ನೀಲಪ್ಪ ಪವರ್ ಸೇರಿದಂತೆ ಇದ್ದರು.

# ವಿಮುಕ್ತಿ ಚಾರಿಟೇಬಲ್ ಟ್ರಸ್ಟ್ ಪೋತ್ನಾಳ್ ವತಿಯಿಂದ ಹೆಣ್ಣು ಮಕ್ಕಳ ದಿನಾಚರಣೆ

ಫಾ.ವಿಜೇಶ್ ಮಿನೇಜಸ್, ಹೆಣ್ಣು ಮಕ್ಕಳ ಪ್ರತಿನಿಧಿಗಳಾಗಿ ಕು.ಅನಿತಾಮರಕಂದಿನ್ನಿ. ಕು. ರೇಷ್ಮಾ ದೇವಿಪುರ,

ವಿಮುಕ್ತಿ ಸಂಸ್ಥೆಯ ತಾ. ಸಂಯೋಜಕರಾದ ಜಯಶೀಲ ದೋತರಬಂಡಿ, ಸಂಸ್ಥೆಯ ಸಿಬ್ಬಂದಿಗಳಾದ ಚಾರ್ಲಿ ಉದ್ಬಾಳ ,ಕು.ಮಮತ, ಈಶಮ್ಮ ಸುಂಕನೂರು, ಲೂರ್ದಮೇರಿ ಮುದ್ದನಗುಡಿ, ಸಿದ್ದಲಿಂಗಮ್ಮ ಉಟಕನೂರು,ಭಾಗ್ಯಮ್ಮ ಪೋತ್ನಾಳ,ಸುಂಕಲಮ್ಮ ದೇವಿಪುರ, ದೇವರಾಯಪ್ಪ ದೋತರಬಂಡಿ, ಜೆಸಿಂತಾ ಮುದ್ದನಗುಡ್ಡಿ, ಆರೋಗ್ಯಪ್ಪ ದುಮತಿ ಪ್ರಿಯಾ ಜವಳಗೇರಾ ಸೇರಿದಂತೆ ಇನ್ನಿತರರು ಇದ್ದರು.

# 151 ಜೋಡಿಗಳ ಸರಳ ಸಾಮೂಹಿಕ ವಿವಾಹ: ಖರ್ಗೆ ಶಾರದಾಬಾಯಿ ಟ್ರಸ್ಟ್ ವತಿಯಿಂದ ಭವ್ಯ ಆಯೋಜನೆ

**ಬೀದರ್,ಅ.20–** ತಾಲೂಕಿನ ರಾಜೀವ್ ಗಾಂಧಿ ಪದವಿ ಪೂರ್ವ ಆವರಣದಲ್ಲಿ ಖರ್ಗೆ ಶಾರದಾಬಾಯಿ ಎಜುಕೇಶನ್ ಅಂಡ್ ಚಾರಿಟೇಬಲ್ ಟ್ರಸ್ಟ್ (ರಿ), ಜನತಾ ಪ್ರವೀಣ್ ಶಿಕ್ಷಣ ಸಂಸ್ಥೆ ಹಾಗೂ ಖರ್ಗೆ ಮಾಣಿಕರಾವ್ ಮೆಮೊರಿಯಲ್ ಶಿಕ್ಷಣ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ "ಸರಳ ಸಾಮೂಹಿಕ ವಿವಾಹ" ಕಾರ್ಯಕ್ರಮ ಭವ್ಯವಾಗಿ ನೆರವೇರಿತು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪೂಜ್ಯ ಧಮ್ಮಾನಂದ ಭಂತೆಜೀ ವಹಿಸಿದ್ದು, ಕಾರ್ಯಕ್ರಮವನ್ನು ಸಂಸದರಾದ ಸಾಗರ್ ಖಂಡ್ರೆ ಜೀ ಅವರು ಉದ್ಘಾಟಿಸಿ, ವಿವಾಹಿತ ದಂಪತಿಗಳಿಗೆ ಆಶೀರ್ವಾದ ಹಾಗೂ ಶುಭಾಶಯ ಕೋರಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಶ್ರೀ ಅನಿಲ್ ಕುಮಾರ್ ಮೇಲ್ದೊಡ್ಡಿ, ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ವಿಠಲ್ ದಾಸ್ ಪ್ಯಾಗೆ, ಜ್ಞಾನೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ. ಕಾಶಿನಾಥ್ ಚಲ್ವ, ಹಾಜರಿದ್ದರು.



ಕಾರ್ಯಕ್ರಮಕ್ಕೆ ಅಧ್ಯಕ್ಷತೆ ವಹಿಸಿದ್ದವರು ರಾಚಪ್ಪ ಖರ್ಗೆ ಆಗಿದ್ದು, ಗೌರವ ಅಧ್ಯಕ್ಷತೆ ಯುಗಪುರುಷ ಚತುರೆ ವಹಿಸಿದರು.

ಇದೇ ವೇಳೆ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ವಿನೋದಕುಮಾರ ಅಪ್ಪೆ, ನಗರಸಭೆ ಸದಸ್ಯ ಹಣಮಂತ ಮಲ್ಕಾಪೂರೆ, ಮಾಜಿ ಸದಸ್ಯ ಧನರಾಜ್ ಹಂಗರಗಿ, ಮಹಾನಗರ ಪಾಲಿಕೆ ಸದಸ್ಯ ಸೂರ್ಯಕಾಂತ್ ಸಾದುರೆ, ಓಬಿಸಿ ಜಿಲ್ಲಾ ಉಪಾಧ್ಯಕ್ಷ ಮುಕೇಶ್ ಚಲ್ವಾ, ಯುವ ಮುಖಂಡರು ಪವನ ಮಿಠಾರೆ ಹಾಗೂ ಇತರೆ ಗಣ್ಯರು ಉಪಸ್ಥಿತರಿದ್ದರು.

### ಸಿರವಾರ: ಪ.ಪಂ. ವತಿಯಿಂದ ಪೌರ ಕಾರ್ಮಿಕರ ದಿನಾಚರಣೆ

# ಸ್ವಚ್ಛತೆ ಕಾಪಾಡುವುದರ ಜೊತೆಗೆ ಆರೋಗ್ಯದ ಕಡೆ ಗಮನ ಹರಿಸಿ : ಹಂಪಯ್ಯ ನಾಯಕ




**ಯುವ ಮಾರ್ಗ ಸುದ್ದಿ**

**ಸಿರವಾರ, ಅ.20–**ನಗರ, ಪಟ್ಟಣಗಳು ಸೌಂದರ್ಯದಿಂದ ಕಾಣಲು ಪೌರ ಕಾರ್ಮಿಕರೇ ಕಾರಣ ಸಮಾಜದಲ್ಲಿ ಆರೋಗ್ಯಕರ ವಾತಾವರಣ ನಿರ್ಮಾಣ ಮಾಡುವಲ್ಲಿ ಪೌರಕಾರ್ಮಿಕರ ಸೇವೆ ಅಪಾರವಾಗಿದ್ದು ಸ್ವಚ್ಛತೆ ಕಾಪಾಡುವುದರ ಜೊತೆಗೆ ಪೌರಕಾರ್ಮಿಕರು ತಮ್ಮ ಆರೋಗ್ಯದ ಕಡೆ ಗಮನ ಹರಿಸಬೇಕೆಂದು ಶಾಸಕ ಜಿ.ಹಂಪಯ್ಯ ನಾಯಕ ಸಲಹೆ ನೀಡಿದರು.

ಪಟ್ಟಣದ ಚುಕ್ಕಿ ರುದ್ರಮ್ಮ ಕಲ್ಯಾಣ ಮಂಟಪದಲ್ಲಿ ಪಟ್ಟಣ ಪಂಚಾಯತಿ ಸಿರವಾರ ವತಿಯಿಂದ ಶನಿವಾರ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಅವರು ಮಾತನಾಡಿದರು, ಪೌರಕಾರ್ಮಿಕರು ನಗರವನ್ನು ಸ್ವಚ್ಛ ಮಾಡಲು ಬೆಳಗಿನ ಜಾವ ನಾಲ್ಕು ಗಂಟೆಯಿಂದ ನಗರದ ರಸ್ತೆಗಳಲ್ಲಿ ಹಾಗೂ ನಮ್ಮ ಬಡಾವಣೆಗಳಲ್ಲಿ ಸ್ವಚ್ಛ ಮಾಡುತ್ತಾ ನಗರವನ್ನು ಸುಂದರಗೊಳಿಸುವ ಕಾರ್ಯದಲ್ಲಿ ತೊಡಗುವ ಪೌರಕಾರ್ಮಿಕರು ತಮ್ಮ ದೈನಂದಿನ ಕಾರ್ಯ ಚಟುವಟಿಕೆಗಳ ಆದ ನಂತರ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಅತ್ಯಂತ ದುರಾದೃಷ್ಟಕರ ಈ ಕೆಟ್ಟ ಚಟಗಳಿಂದ ತಾವು ದೂರ ಸರಿದು ತಮ್ಮ ಆರೋಗ್ಯದ ಕಡೆಗೆ ಗಮನ ಹರಿಸಿ ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದಾಗ ತಾವು ಸಹ ಉತ್ತಮ ಜೀವನವನ್ನು ಸಾಗಿಸಲು ಸಾಧ್ಯವೆಂದು ಹೇಳಿದರು.

ಈ ವೇಳೆ ಸಿರವಾರ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತದಿಂದ ಅದರ ಅಧ್ಯಕ್ಷರಾದ ಎನ್.ಉದಯಕುಮಾರ್ ಅವರು ಪೌರಕಾರ್ಮಿಕರಿಗೆ ತಲಾ 500 ರೂ. ನೀಡಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಅಶೋಕ ಪವಾರ, ಅಧ್ಯಕ್ಷ ವೈ.ಭೂಪನಗೌಡ, ಉಪಾಧ್ಯಕ್ಷೆ ಲಕ್ಷ್ಮೀ ಆದೆಪ್ಪ, ಬ್ರೀಜೇಶ ಗಪಾಟೀಲ್, ಶಿವಶರಣ ಸಾಹುಕಾರ, ರಮೇಶ ದರ್ಶನಕರ್, ರೇಣುಕಾ, ಆರೀಫ್ ಮಿಯಾ, ಮುಖ್ಯಾಧಿಕಾರಿ ಸುರೇಶ ಶೆಟ್ಟಿ, ಪ.ಪಂ. ಸದಸ್ಯರಾದ ಕೃಷ್ಣ ನಾಯಕ, ಖಾಜಮ್ಮ, ಹಸೇನ ಅಲಿ ಸಾಬ್, ಅಮರಮ್ಮ , ಹಾಜಿ ಚೌದ್ರಿ, ಪುತ್ರಮ್ಮ, ಹೆಚ್.ಮಾರ್ಕಪ್ಪ, ಸೂರಿ ದುರುಗಣ್ಣನಾಯಕ, ಹನುಮಂತಿ, ಜ್ಯೋತಿ, ಚಂದಮ್ಮ, ಅಜೀತ್ ಹೊನ್ನಟಗಿ, ಮೌಲಾಸಾಬ ವರ್ಚಸ್, ಅಮರೇಶ ಗಡ್ಲ, ಚನ್ನಬಸವ ಗಡ್ಲ, ಸಂದೀಪ್ ಪಾಟೀಲ್, ಹನುಮಂತಿ, ಬಸ್ಸಮ್ಮ, ನಾಮ ನಿರ್ದೇಶನ ಸದಸ್ಯ ಮಲ್ಲಿಕಾರ್ಜುನ ಸೇರಿದಂತೆ ಪಟ್ಟಣದ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಇನ್ನಿತರರು

# ಮಕ್ಕಳು ಕೌಶಲ್ಯ ಅಭಿವೃದ್ದಿಯಲ್ಲಿ ತಮ್ಮನ್ನು ತಾವು ತೊಡಗಿಸಿ ಕೊಳ್ಳಬೇಕಾಗಿದೆ :ಅರಳಿ ಕುಮಾರಸ್ವಾಮಿ

**ಸಂಡೂರು,ಅ,20–** ವಿದ್ಯಾರ್ಥಿಗಳ ಜೀವನ ಸುವರ್ಣಮಯ ಜಿವನದಲ್ಲಿ ಸುಮದರಲ್ಲಿ ಬದುಕನ್ನ ಕಟ್ಟಿಕೊಲ್ಳಬೇಕಾಗಿದೆ. ಬದುಕಿನಲ್ಲಿ ಜಂಜಾಟದಲ್ಲಿ ಕೌಶಲ್ಯಾಭಿವೃದ್ದಿಯಲ್ಲಿ ತಮ್ಮನ್ನು ತಾವು ತೊಡಗಡಿಸಿಕೊಳ್ಳಬೆಕಾಗಿದೆ. ತಮ್ಮ ಜೀವನವನ್ನು ಸುಂದವರಾದ ಬದುಕನ್ನು ಕಟ್ಟಿಕೊಳ್ಳಲು ಸಾಧನೆಯ ಮೂಲಕ ಶ್ರಮಿಸಬೇಕಾದಾದುದು ಅತೀ ಅವಶ್ಯ. ವಿದ್ಯೆಯನ್ನು ಕಲಿಯುವಾಗ ಬಹಳ ತಾಪತ್ರಯ್ಯವನ್ನು ವಿದ್ಯೆ ಕಲಿಯವವರಿಗೆ ಬ್ರಹ್ಮ ವಿದ್ಯೆಯಾಗಿ ಮಾರ್ಪಡಾಗುವುದು ಸಹಜ. ಅದು ಆದರೆ, ಅದು ಕಲಿತ ಮೆಲೆ ಕೋತಿ ವಿದ್ಯೆಯಾಗಿ ಮಾರ್ಪಾಡುತ್ತಾದೆ. ಬ್ರಹ್ಮ ವಿದ್ಯೆ ಕಲಿಯಬೇಕಾದರೆ, ಸಾಧನೆ ಮುಖ್ಯ. ವಿದ್ಯಾರ್ಥಿಗಳಿಗೆ ಸಾಧನೆ ಮತ್ತು ಗುರಿ ಇದ್ದರೆ, ಕೌಶಲ್ಯಭಿವೃದ್ದಿಯ ಪ್ರತಿಗೆ ಸದ್ಯ. ವಿದ್ಯ ಎಕಲಿಯುವಲ್ಲಿ ಪುರಶ ಪ್ರಧಾನ ಕ್ಕಿಂತ ಮಹಿಳೆಯರೇ ಮಹಿಳೆಯರಿಗಿಂತ ನಾವೇನು ಕಡಿಮೆ ಇಲ್ಲ ಎನನುವ ಭಾವನೆ ಪುರಸವರ್ಗಕ್ಕೆ ಪ್ರಗತಿ ಕಾಣಲು ಸಾದ್ಯ ಸ್ಕಂದ ಕಂಪ್ಯೂಟರ್ ಕಲಿಕಾ ತಬರೇತಿಯಲ್ಲಿ ಆಸ್ತಿ ವಹಿಸಲು ಅರಳಿ ಕುಮಾರಸ್ವಾಮಿ ವರಿದಾಗರ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು

ಅವರು ಎಲ್.ಬಿ. ಕಾಲೋನಿಯ ನ್ಯಾಯಾಲಯ ರಸ್ತೆಯ 11ನೆ ವಾರ್ಡಿನ ಸ್ಕಮದಪುರ ಕಂಪ್ಯೂಟರ್ ತರಬೇತಿ ಸಂಸ್ಥೆಯಲ್ಲಿ ಸಿ.ಎಸ್.ಆರ್. ಕೌಶಲ್ಯ ಅಭಿವರ್ರುದ್ದಿ ಕಾರ್ಯಕ್ರಮದಡಿಯಲ್ಲಿ ಮೆ॥ ಜೇನತ್ ಟ್ರಾನ್ಸ್ ಪೋರ್ಓರ್ಟ್ ಕಂಪನಿ ಮೆ॥ ಎಸ್.ಎ. ತಲಾಬ್ ಕಂಪನಿಯಲ್ಲಿ ಸ್ಥಳೀಯ ಶಭಿರ ವಿದ್ಯಾರ್ಥಿಗಳಿಗೆ ತರಬೇತಿ ಪ್ರಮಾಣ ಪತ್ರವನ್ನು ವಿತರಿಸಿ ಮಾತನಾಡಿದರು.ಅ ವರು ಮುಂದು ವರೆದು ನಿರಿತ ಶಿಕ್ಷಕೀಯರಾದ ಆಫ್ರಿನಾ ಸಲ್ಮಾ ಬಾನು ಪುರ್ಣಿಮಾ ಸಾಹಿ ತಾಜ್ ಇವರ ನೇತೃತ್ವದಲ್ಲಿ ಅಂಕಿತ ಜೆ.ಕ.ಎ ಬಷೀರ್ ಎಚ್.ಎಂ. ಮಹಾಲಕ್ಷ್ಮೀ ಕಾರ್ಥಿಕ ಎಂ. ಪ್ರಜ್ವಲ ಎಮ್.ಎಸ್. ಮಹೊಮಮ್ಮದ್ ಸಾಹಿಲ್ ಪರಶುರಾಮ ಸಿ. ಸೇವಲಾಲ್ ನಾಯಕ ವೈಶಲಿ ಎಸ್. ಅಖಿಲೇಶ್ ಎನ್. ಸಾಹೀತನ ರಮೇಶ ಕೆ. ನರಸಿಂಹನ್ ಎನ್. ಎಚ್. ಮಲ್ಲೇಶಿ ಮಣಿಕಂಠ ದಯಾನಂದ ಎಸ್. ಅರುಣಾ ನಾಯ್ಕ ಶೌಏತ ಎಸ್. ಎ. ಪರಶುರಮ ನಾಯಕ ದಿವ್ಯಾ ರಮೇಶ ಬಿ.ಎ. ಇವರಿಗೆ ಝುಡ್ ಟಿ.ಸಿ. ಪಿ.ಆರ್.ಓ. ಸುಏಶ್ ಇವರ ಸಹಯೋಗದಲ್ಲಿ ಪ್ರಮಾಣ ಪತ್ರ ವಿತರಿಸಿ ಮಾತನಾಡಿದರು.

ಝುಡ್ ಟಿ.ಸಿ. ಮಯನ್ಸ್ ನ ಸುರೇಶ್ ರವರು ಮಾತನಾಡಿ 1994ರಲ್ಲಿ ಜಿನತ್ ಕಂಪಿಗೆ ಸೇರುವಷ್ಟರಲ್ಲಿ ಕಂಪನಿ ಯುಗದಲ್ಲಿ




ಕಂಪ್ಯೂಟರ್ ಪ್ರಾರಂಭವಾಯಿತು. ಕಂಪ್ಯುಟರ್ ಬಗ್ಗೆ ತರಬೇತಿ ಇಲ್ಲದ ನನಗೆ ಕಂಪ್ಯೂಟರ್ ಮುಟ್ಟಲು ಭಯ ಪಟ್ಟ ನಾನು ಮುಜುಗರಕ್ಕೆ ಒಳಗಾದ 1 ವಾರ, 10 ದಿನದಲ್ಲಿ ಕಂಪ್ಯುಟರ್ ಕಲಿತ ನಾನು ಇನ್ನೊಬ್ಬರಿಗೆ ತರಬೇತಿ ನೀಡಿದೆ. ಇಂದಿನ ದಿನ ಮಾನಕ್ಕೂ ಈಗಿನ ದಿನಮಾನಕ್ಕೂ ಅಜಗಜಾಂತರ ವ್ಯತ್ಯಾಸವಿದೆ. ಇಂದಿನ ಪ್ರಮಾಣ ಪತ್ರಗಳು ಮುಂದಿನ ಜೀವನಕ್ಕೆ ವಿದ್ಯಾಥಿಗಳು ದಾರಿ ದಿಪವಾಗಬೇಕಾಗಿದೆ. ಬಡತನ ರೇಕೆಯಲ್ಲಿ ಸಾಧನೆ ಮಾಡಿ ಅಭ್ಯಾಸ ಮಾಡಿದ ನಾನು ಕಲಿಯಲು ಆಸ್ತಕ್ತಿ ಹೊಂದಿಎ. ಕಲಿಯಲು ಆಸಕ್ತಿ ಹೊಂದಿದೆ ಶುಲ್ಕ ಕಟ್ಟಲು ಆಗದೇ ಹೋದಲ್ಲಿ ವಿದ್ಯಾರ್ಥಿಗಳು ನನ್ನ ದೂರವಾಣಿಗೆ ಕರೆ ಮಾಡಿದರೆ ಬಡ ವಿದ್ಯಾರ್ಥಿಗಳಿಗೆ ಶುಲ್ಕ ಕಟ್ಟಿ ಪ್ರೋಶಾಹಸಿವುದು ಇದರ ಸದಪಯೋಗವನ್ನು ವಿದ್ಯಾರ್ಥಿಗಳು ಸದಪಯೋಗ ಪಡಸಿಕೊ ಳ್ಳಲು ಮನವಿ ಮಾಡಿದರು. ನನ್ನ ದೂರವಾಣಿ ಸಂಖ್ಯೆ ಸ್ಕಂದ ಕಂಪ್ಯೂಟರ್ ಸಂಸ್ಥೆಯ ಮಾಲೀಕರ ಬಳಿ ಇದೆ. ಅವರನ್ನು ಕೇಳೀದರೆ, ಖಂಡಿತವಾಗಿಯು ನಂಬರ್ ನ್ನು ಕೊಡುತ್ತಾರೆ. ಮೆ॥ ಜೀನತ್ ಟ್ರಾನ್ಸ್‌ಪೋರ್ಟ್ ಕಂಪನಿ ಮೆ॥ ತಲಾಬ್ ಕಂಪನಿಯವರು ಕಲಿಯಲು ಆಸಕ್ತಿ ಹೊಂದಿದೆ 22 ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನಿಡುವ ಕಾಯ್ಕಮದಲ್ಲಿ ಮಾತನಾಡಿದರು. ಸ್ಕಂದ ಕಂಪ್ಯೂಟರ್ ತರಬೇತಿಯ ಮುಖ್ಯಸ್ಥ ದರೂರು ವಿಶ್ವನಾಥ ಗೌಡರು ಅತಿಥಿಗಳ ಪರಿಚಯ ಕಾಯ್ಕಮ ನಿರೂಪಣೆ ಸ್ವಾಗತ ಭಾಷಣ ವಂದನಾರ್ಪಣೆ ನೆರವೇರಿಸಿದರು. ಸಂಸ್ಥೆಯ ವಿದ್ಯಾರ್ಥಿಗಳಿಂದ ಪ್ರಾರ್ಥನ ಕಾಯಕ್ರಮ ನೆರವೇರಿತು. ಈ ಸಂದರ್ಭದಲ್ಲಿ ದರೂರು ಸುಜಾತಮ್ಮ ಕುಸುಮಾಮ, ಮತ್ತು ಕಾರ್ತಿಕಾ ಉಪಸ್ತಿತರಿದ್ದು, ಕಾರ್ಯಕ್ರಮವನ್ನು ಯಶ್ವಿಸಗೊಳಿಸಿದರು.

# ಭಾಲ್ಕಿ ಪಟ್ಟಣದಲ್ಲಿ ಶತಾಬ್ದಿ ನಿಮಿತ್ತ ಆರ್‌ಎಸ್‌ಎಸ್‌ನಿಂದ ಭವ್ಯ ಪಥಸಂಚಲನ

**ಭಾಲ್ಕಿ, ಅ.20–**ಪಟ್ಟಣದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ(ಆರ್‌ಎಸ್‌ಎಸ್) ಶತಾಬ್ದಿ ಮತ್ತು ವಿಜಯದಶಮಿ ನಿಮಿತ್ತ ಭವ್ಯ ಪಥಸಂಚಲನ ಸಾಗಿತು. ಭಾಲ್ಕೇಶ್ವರ ಮಂದಿರ ಆವರಣದಲ್ಲಿ ಶನಿವಾರ ಸಾವಿರಾರು ಗಣ ವೇಷಧಾರಿಗಳು ಜಮಾಗೊಂಡು ತಾಯಿ ಭಾರತಾಂಬೆ, ಕೇಶವ ಬಲಿರಾಮ ಹೆಡಗೇವಾರ್ ಹಾಗೂ ಮಾಧವ ಸದಾಶಿವ ಗೋಳ್ವಾಲ್ಕರ್ ಭಾವಚಿತ್ರಗಳೊಂದಿಗೆ ಪಥಸಂಚಲನ ಆರಂಭಿಸಿದರು.

ಮಾರ್ಗದುದ್ದಕ್ಕೂ ಜನರು ರಂಗೋಲಿ ಹಾಕಿ ಹೂವಿನ ಮಳೆಗೈದರು. ಖಾಕಿ ಬಣ್ಣದ ಪ್ಯಾಂಟ್, ಶುಭ್ರ ಬಿಳಿ ವರ್ಣದ ಅಂಗಿ, ತಲೆಗೆ ಕರಿ ಟೋಪಿ ಧರಿಸಿ ಕೈಯಲ್ಲಿ ದಂಡವನ್ನು ಹಿಡಿದಿದ್ದ ಸ್ವಯಂಸೇವಕರು ಗಮನ ಸೆಳೆದರು. ಭಾರತ ಮಾತಾಕಿ ಜೈ , ಜೈ ಶ್ರೀರಾಮ್ ಎನ್ನುವ ಜಯಘೋಷ ಮೊಳಗಿದವು.

ಹಳೇ ಪಟ್ಟಣ, ಚವಡಿ, ತಿನ್ ದುಕಾನ್, ಗಡಿ ಏರಿಯಾ, ಬೋಮ



ಗೊಂಡೇಶ್ವರ ವೃತ್ತ, ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತ, ಸಂಗಮೇಶ್ವರ ಚಿತ್ರ ಮಂದಿರ, ಮಹಾತ್ಮ ಗಾಂಧಿ ವೃತ್ತ, ಬಸವೇಶ್ವರ ವೃತ್ತದ ಮೂಲಕ ಚನ್ನಬಸವಾಶ್ರಮದಲ್ಲಿ ಸಮಾಪ್ತಿಗೊಂಡಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಪ್ರಕಾಶ ಖಂಡ್ರೆ, ಯುವ ನಾಮದೇವರಾವ ಪವಾರ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಗಣವೇಶಧಾರಿಗಳು ಭಾಗವಹಿಸಿದ್ದರು.

# ಸಿಂಧೂರಕ್ಕೆ ಪಾಕ್ ತತ್ತರ:ಮೋದಿ

**ನವದೆಹಲಿ,ಅ.20–** ಆಪರೇಷನ್ ಸಿಂಧೂರ ಸಂದರ್ಭದಲ್ಲಿ ಮೂರು ಸೇನಾ ಪಡೆಗಳ ಹೊಡೆತಕ್ಕೆ ಪಾಕಿಸ್ತಾನ ತತ್ತರಿಸಿ ಹೋಗಿತ್ತು. ನಮ್ಮ ಸೇನೆಯನ್ನು ಎದುರಿಸಲಾಗಿದೆ ಪಾಕ್ ಶರಣಾಗತಿಗೆ ಮೊರೆಯಿಟ್ಟಿತು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ನಮ್ಮ ತಂಟೆಗೆ ಬಂದರೆ ಸುಮ್ಮನೆ ಬಿಡುವುದಿಲ್ಲ ಎಂಬುದನ್ನು ಆಪರೇಷನ್ ಸಿಂಧೂರ ಕಾರ್ಯಾಚರಣೆ ಮೂಲಕ ಪಾಕಿಸ್ತಾನಕ್ಕೆ ಖಡಕ್ ಸಂದೇಶ ರವಾನಿಸಲಾಗಿದೆ ಎಂದ ಅವರು ಸೇನಾ ಪಡೆಗಳ ಅದ್ಭುತ ಶೌರ್ಯ ಮತ್ತು ದೃಢಸಂಕಲ್ಪವನ್ನು ಮುಕ್ತಕಂಠದಿಂದ ಶ್ಲಾಘಿಸಿದರು.


ಬೆಳಕಿನ ಹಬ್ಬ ದೀಪಾವಳಿ ಶುಭ ಸಂದರ್ಭದಲ್ಲಿ ಗೋವಾ ರಾಜಧಾನಿ ಪಣಜಿಯಲ್ಲಿ ಐಎನ್‌ಎಸ್ ವಿಕ್ರಾಂತ್‌ನಲ್ಲಿ ನೌಕಾ ಪಡೆಯ ಸಿಬ್ಬಂದಿಯನ್ನು ಉದ್ದೇಶಿಸಿ ಮಾತನಾಡಿದ ಅವರು , ಐಎನ್‌ಎಸ್ ವಿಕ್ರಾಂತ್ ಕೇವಲ ಯುದ್ಧ ನೌಕೆಯಲ್ಲ. 21ನೇ ಶತಮಾನದ ಭಾರತದ ಕಠಿಣ ಪರಿಶ್ರಮ, ಪ್ರತಿಭೆ, ಪ್ರಭಾವ ಹಾಗೂ ಬದ್ಧತೆಗೆ ಸಾಕ್ಷಿಯೆಂದು ಮೋದಿ ಹೇಳಿದರು. ಐಎನ್ ಎಸ್ ವಿಕ್ರಾಂತ್ ಭಾರತದ ಸಶಸ್ತ್ರ ಪಡೆಗಳ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ. ಇದು ಆತ್ಮನಿರ್ಭರ ಭಾರತದ ಅತ್ಯುನ್ನತ ಸಂಕೇತವು ಆಗಿದೆ ಎಂದು ವಿಶ್ಲೇಷಿಸಿದರು.

ಐಎನ್‌ಎಸ್ ವಿಕ್ರಾಂತ್‌ನಲ್ಲಿ ನಿನ್ನೆ ಕಳೆದ ರಾತ್ರಿಯನ್ನು ಪದಗಳಲ್ಲಿ ವರ್ಣಿಸುವುದು ಕಷ್ಟ. ನಿಮ್ಮಲ್ಲಿರುವ ಆಗಾಧ ಶಕ್ತಿ ಮತ್ತು ಉತ್ಸಾಹವನ್ನು ಕಂಡಿದೆ. ನೀವು ದೇಶ ಭಕ್ತಿಗೀತೆಗಳನ್ನು ಹಾಡುವುದನ್ನು ನೋಡಿದಾಗ ನಿಮ್ಮ ಹಾಡುಗಳಲ್ಲಿ ಆಪರೇಷನ್ ಸಿಂಧೂರ ನೆನಪಾಗುತ್ತದೆ ಎಂದು ಹೇಳಿದರು.

ಯುದ್ಧ ಭೂಮಿಯಲ್ಲಿ ನಿಂತಿರುವ ಯೋಧರ ಅನುಭವನ್ನು ಯಾವುದೇ ಪದಗಳಲ್ಲಿ ಸಂಪೂರ್ಣವಾಗಿ ಸಾಧ್ಯವಿಲ್ಲ ಎಂಬುದು ತಮ್ಮ ಅರಿವಿಗೆ ಬಂದಿದೆ. ಹೀಗಾಗಿ ದೀಪಾವಳಿಯನ್ನು ನಿಮ್ಮೊಂದಿಗೆ ಕಳೆದಿದ್ದು ತುಂಬಾ ವಿಶೇಷವಾಗಿದೆ ಎಂದು ಬಣ್ಣಿಸಿದರು.

ಭಾರತವನ್ನು ವಿಶ್ವದ ಪ್ರಮುಖ ರಕ್ಷಣಾ ರಫ್ತುದಾರರ ಪೈಕಿ ಒಂದನ್ನಾಗಿ ಮಾಡುವುದು ಕೇಂದ್ರ ಸರ್ಕಾರದ ಗುರಿಯಾಗಿದೆ. 2014 ರಿಂದ ಇದುವರೆಗೂ 40ಕ್ಕೂ ಹೆಚ್ಚು ಯುದ್ಧ ನೌಕೆಗಳು ಮತ್ತು ಜಲಾಂತರ್ಗಾಮಿ ನಿರ್ಮಿಸಿದ್ದೇವೆ ಎಂದರು.

ಬ್ರಹ್ಮೋಸ್ ಕ್ಷಿಪಣಿ ಹೆಸರು ಕೇಳಿದರೆ ಕೆಲವರ ಹೆಸರುಗಳಲ್ಲಿ ನಡುಕ ಉಂಟು ಮಾಡುತ್ತದೆ ಎಂದು ಪಾಕಿಸ್ತಾನಕ್ಕೆ ಪರೋಕ್ಷ ತಿರುಗೇಟು ನೀಡಿದರು. ಪಾಕ್ ವಿರುದ್ಧ ಪ್ರಯೋಗಿಸಲಾದ ಬ್ರಹ್ಮೋಸ್ ಕ್ಷಿಪಣಿಗೆ ಅನೇಕ ದೇಶಗಳು ಖರೀದಿಸಲು ಉತ್ಸುಕವಾಗಿದೆ ಎಂದು ಹೇಳಿದರು.



ಸ್ವದೇಶಿ ಉತ್ಪಾದನೆಗೆ ಒತ್ತು

ಕಳೆದ ದಶಕದಲ್ಲಿ, ಭಾರತದ ರಕ್ಷಣಾ ವಲಯ ಸ್ವದೇಶಿ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಿದೆ. ಕಳೆದ 11 ವರ್ಷಗಳಲ್ಲಿ ಉತ್ಪಾದನೆ ಮೂರು ಪಟ್ಟು ಹೆಚ್ಚಾಗಿದೆ, ಸರಿಸುಮಾರು ಪ್ರತಿ 40 ದಿನಗಳಿಗೊಮ್ಮೆ ನೌಕಾಪಡೆಗೆ ಹೊಸ ಯುದ್ಧನೌಕೆ ಅಥವಾ ಜಲಾಂತರ್ಗಾಮಿ ಸೇರಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ

ಬ್ರಹ್ಮೋಸ್ ಕ್ಷಿಪಣಿಗೆ ಜಾಗತಿಕ ಬೇಡಿಕೆ ಹೆಚ್ಚಿಸಿದೆ, ಭಾರತವು ಶೀಘ್ರದಲ್ಲೇ ವಿಶ್ವದ ಅಗ್ರ ರಕ್ಷಣಾ ರಫ್ತುದಾರರಲ್ಲಿ ಸ್ಥಾನ ಪಡೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರೂಪಾಂತರದಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದಕ್ಕಾಗಿ ಅವರು ಸ್ಟಾರ್ಟ್‌ಅಪ್‌ಗಳು ಮತ್ತು ಸ್ಥಳೀಯ ರಕ್ಷಣಾ ಘಟಕಗಳನ್ನು ಶ್ಲಾಘಿಸಿದ ಅವರು ಹೊಸ ಪೀಳಿಗೆಯ ಭರವಸೆಯನ್ನು ದೇಶದ ಶಕ್ತಿ ಎಂದಿದ್ದಾರೆ.

ನಕ್ಸಲ್ ಮುಕ್ತ ಭಾರತ

ಸೇನಾಪಡೆಗಳ ಶೌರ್ಯ ಮತ್ತು ದೃಢಸಂಕಲ್ಪದಿಂದ ದೇಶವನ್ನು ನಕ್ಸಲ್ ಮುಕ್ತಗೊಳಿಸಲು ದಾಪುಗಾಲು ಇಟ್ಟಿದ್ದೇವೆ. ನಕ್ಸಲ್ ಹಿಂಸಾಚಾರವನ್ನು ನಿರ್ಮೂಲನೆ ಮಾಡುವಲ್ಲಿ ಮಹತ್ವದ ಮೈಲಿಗಲ್ಲನ್ನು ದೇಶ ಸಾಧಿಸಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ದೇಶದಲ್ಲಿ 125 ಜಿಲ್ಲೆಗಳು ನಕ್ಸಲರ ಕಪಿಮುಷ್ಠಿಯಲ್ಲಿದ್ದವು. ನಕ್ಸಲ್ ನಿಗ್ರಹ ಕಾರ್ಯಾಚರಣೆಯಿಂದ ಈ ಸಂಖ್ಯೆ ಈಗ 11 ಜಿಲ್ಲೆಗಳಿಗೆ ಇಳಿದಿದೆ. ಶೇ. 90 ರಷ್ಟು ಯಶಸ್ಸು ಸಾಧಿಸಲಾಗಿದೆ. ಮುಂದಿನ ದಿನಗಳಲ್ಲಿ ನಕ್ಸಲ್ ಹಿಂಸಾಚಾರವನ್ನು ಸಂಪೂರ್ಣ ನಿರ್ಮೂಲನೆ ಮಾಡುವ ವಿಶ್ವಾಸ ತಮ್ಮದಾಗಿದೆ ಎಂದರು.

# ಯೂಸುಫ್ ಪಠಾಣ್ ಪೋಸ್ಟ್ ವಿವಾದಕ್ಕೆ ಎಡೆ





**ನವದೆಹಲಿ,ಅ.20–**ಭಾರತದ ಮಾಜಿ ಕ್ರಿಕೆಟಿಗ ಮತ್ತು ತೃಣಮೂಲ ಕಾಂಗ್ರೆಸ್ ಸಂಸದ ಯೂಸುಫ್ ಪಠಾಣ್ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್ ವಿವಾದವನ್ನು ಹುಟ್ಟುಹಾಕಿದೆ. ಅವರು ಮಾಲ್ಡಾದ ಅದೀನಾ ಮಸೀದಿಯ ಫೋಟೋಗಳನ್ನು ಹಂಚಿಕೊಂಡಿದ್ದಾರೆ, ಇದು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಭಾರತೀಯ ಜನತಾ ಪಕ್ಷವು ಮಸೀದಿಯನ್ನು ಆದಿನಾಥ ದೇವಾಲಯ ಎಂದು ಬಣ್ಣಿಸಿದ್ದು, ಸಾಮಾಜಿಕ ಮಾಧ್ಯಮ ಬಳಕೆದಾರರಲ್ಲಿ ಚರ್ಚೆಗೆ ನಾಂದಿ ಹಾಡಿದೆ.

ಯೂಸುಫ್ ಪಠಾಣ್ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್ ಅದೀನಾ ಮಸೀದಿಗೆ ಸಂಬಂಧಿಸಿದಂತೆ ವಿವಾದವನ್ನು ಹುಟ್ಟುಹಾಕಿದೆ. ಬಿಜೆಪಿ ಇದನ್ನು ಆದಿನಾಥ ದೇವಾಲಯ ಎಂದು ಬಣ್ಣಿಸಿದ್ದು, ಸಾಮಾಜಿಕ ಮಾಧ್ಯಮದಲ್ಲಿ ಚರ್ಚೆಗೆ ನಾಂದಿ ಹಾಡಿದೆ. ಪಠಾಣ್ ಮಸೀದಿಯ ಐತಿಹಾಸಿಕತೆಯನ್ನು ಎತ್ತಿ ತೋರಿಸಿದರೆ, ಬಿಜೆಪಿ ಇದನ್ನು ದೇವಾಲಯದ ಮೇಲೆ ನಿರ್ಮಿಸಲಾದ ಸ್ಮಾರಕ ಎಂದು ಪ್ರಸ್ತುತಪಡಿಸಿದೆ.

ಆದಿನಾ ಮಸೀದಿಯನ್ನು 14 ನೇ ಶತಮಾನದ ಐತಿಹಾಸಿಕ ಸ್ಮಾರಕ ಎಂದು ಬಣ್ಣಿಸಿರುವ ಬಿಜೆಪಿ, ಇದನ್ನು ದೇವಾಲಯದ ಮೇಲೆ ನಿರ್ಮಿಸಲಾಗಿದೆ ಎಂದು ಹೇಳಿದೆ. ಅಲ್ಲಿ ಹಿಂದೆ ಹಿಂದೂ ಆಚರಣೆಗಳನ್ನು ನಡೆಸಲಾಗುತ್ತಿತ್ತು, ಇದನ್ನು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ತನಿಖೆ ನಡೆಸಿತ್ತು ಎಂದು ಪಕ್ಷ ಹೇಳಿದೆ. ಪಠಾಣ್ ಅವರ ಭೇಟಿಯು ದೇವಾಲಯ–ಮಸೀದಿ ವಿವಾದವನ್ನು ಮತ್ತೊಮ್ಮೆ ಕೆರಳಿಸಿದೆ.

ಪಶ್ಚಿಮ ಬಂಗಾಳದ ಮಾಲ್ಡಾದಲ್ಲಿರುವ ಅದೀನಾ ಮಸೀದಿಯು 14 ನೇ ಶತಮಾನದಲ್ಲಿ ಇಲ್ಯಾಸ್ ಶಾಹಿ ರಾಜವಂಶದ ಸುಲ್ತಾನ್ ಸಿಕಂದರ್ ಷಾ ನಿರ್ಮಿಸಿದ ಐತಿಹಾಸಿಕ ತಾಣವಾಗಿದೆ. ಈ ಮಸೀದಿಯನ್ನು ಕ್ರಿ.ಶ. 1373–1375 ರ ನಡುವೆ ನಿರ್ಮಿಸಲಾಗಿದೆ ಮತ್ತು ಆ ಸಮಯದಲ್ಲಿ ಭಾರತೀಯ ಉಪಖಂಡದ ಅತಿದೊಡ್ಡ ಮಸೀದಿ ಎಂದು ಪರಿಗಣಿಸಲಾಗಿತ್ತು ಎಂದು ಯೂಸುಫ್ ಪಠಾಣ್ ಗುರುವಾರ ಇನ್‌ಸ್ಟಾಗ್ರಾಮ್‌ನಲ್ಲಿ ಪುರಾತತ್ವ ಸ್ಮಾರಕದ ಫೋಟೋಗಳೊಂದಿಗೆ ಬರೆದಿದ್ದಾರೆ.

ತೃಣಮೂಲ ಸಂಸದರ ಪೋಸ್ಟ್‌ನಿಂದಾಗಿ ಬಂಗಾಳ ಬಿಜೆಪಿ ಘಟಕವು ಅದನ್ನು ಆದಿನಾಥ ದೇವಾಲಯ ಎಂದು ಹೇಳಿದೆ.ಇದರ ನಂತರ, ಸಾಮಾಜಿಕ ಮಾಧ್ಯಮ ಬಳಕೆದಾರರು ಸಂಸದರಿಗೆ ವಿವಿಧ ಐತಿಹಾಸಿಕ ಉಲ್ಲೇಖಗಳನ್ನು ಉಲ್ಲೇಖಿಸಿ, ಅವರು ಉಲ್ಲೇಖಿಸುತ್ತಿರುವ ಸ್ಮಾರಕವು ವಾಸ್ತವವಾಗಿ ದೇವಾಲಯದ ಮೇಲೆ ನಿರ್ಮಿಸಲ್ಪಟ್ಟಿದೆ ಎಂದು ಸೂಚಿಸಿದ್ದಾರೆ.ಕಳೆದ ವರ್ಷ, ಕೆಲವು ಪುರೋಹಿತರು ಮಸೀದಿಯೊಳಗೆ ಹಿಂದೂ ಆಚರಣೆಗಳನ್ನು ನಡೆಸಿದ್ದಾರೆ. ವೃಂದಾವನ ವಿಶ್ವವಿದ್ಯಾ ಟ್ರಸ್ಟ್‌ನ ಅಧ್ಯಕ್ಷ ಹಿರಣ್ಮಯ್ ಗೋಸ್ವಾಮಿ, ಹಿಂದೂ ದೇವತೆಗಳ ವಿಗ್ರಹಗಳನ್ನು ನೋಡಿ ಮಸೀದಿಯನ್ನು ಹಿಂದೂ ದೇವಾಲಯದ ಮೇಲೆ ನಿರ್ಮಿಸಲಾಗಿದೆ ಎಂದು ಹೇಳಿಕೊಂಡಿದ್ದಾರೆ.

ಸ್ಥಳೀಯ ನಿವಾಸಿಗಳು ದೂರು ನೀಡಿದ ನಂತರ ಪೊಲೀಸರು ಅವರನ್ನು ತಡೆದಿದ್ದಾರೆ. , ಭಾರತೀಯ ಪುರಾತತ್ವ ಸಮೀಕ್ಷೆಯು ಗೋಸ್ವಾಮಿ ವಿರುದ್ಧ ಪ್ರಕರಣ ದಾಖಲಿಸಿದೆ.

ಈ ಘಟನೆಯ ನಂತರ, ರಾಷ್ಟ್ರೀಯ ಪ್ರಾಮುಖ್ಯತೆಯ ಸ್ಮಾರಕವೆಂದು ಗೊತ್ತುಪಡಿಸಿದ ಮಸೀದಿಯನ್ನು ಮುಚ್ಚಲಾಗಿದೆ. ಆವರಣದಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಯಿತು ಮತ್ತು ಪೊಲೀಸ್ ಠಾಣೆಯನ್ನು ಸಹ ಸ್ಥಾಪಿಸಲಾಗಿದೆ.

# ಜಿಲ್ಲಾ ಮಟ್ಟದ ಸರ್ವೋತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ



**ಕಲಬುರಗಿ,ಅ.20–**ಸುಭಾಷ್ ಚಂದ್ರ ಪಾಟೀಲ್ ಸ್ಮಾರಕ ಜಲಕ ಲ್ಯಾಣ ಟ್ರಸ್ಟ್ ಪಾಳಾ ವತಿಯಿಂದ ಕೊಡುವ ಜಿಲ್ಲಾ ಮಟ್ಟದ ಸರ್ವೋತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಹಾಗೂ ಅಂತರ್ಮುಖಿ, ಹೊಸಮನಿ ಸಿರಿ ಪುಸ್ತಕ ಬಿಡುಗಡೆ ಸಮಾರಂಭವನ್ನು ವೀರಮ್ಮ ಗಂಗಸಿರಿ ಮಹಿಳಾ ಮಹಾವಿದ್ಯಾಲಯದ ಸಭಾಂಗಣದಲ್ಲಿ ಜರುಗಿತು.

ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿದ ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ. ನಮೋಶಿಯವರು ಮಾತನಾಡಿ ಶಿಕ್ಷಕರು ಭಾರತದ ಭವಿಷ್ಯದ ನಾಗರಿಕರನ್ನು ರೂಪಿಸುವ ಶಿಲ್ಪಿಗಳು . ಅವರು ಹೆಚ್ಚಿನ ಸಮಯವನ್ನು ಬೋಧನೆ ಮತ್ತು ಕಲಿಕೆಯಲ್ಲಿ ನಿರತರಾಗುವಂತೆ ನಾವು ವಾತಾವರಣ ಕಲ್ಪಿಸಬೇಕು . ಅವರಿಗೆ ಕಲಿಕಾ ಚಟುವಟಿಕೆಗಳಿಂದ ಹೊರಗೆ ಉಳಿಯುವಂತೆ ಅನ್ಯ ಕೆಲಸಗಳಿಗೆ ನೇಮಿಸಬಾರದು . ಸರಕಾರದ ವ್ಯವಸ್ಥೆ ಶಿಕ್ಷಕರನ್ನು ಭಯದ ವಾತಾವರಣ ಸೃಷ್ಟಿಸಬಾರದು ಎಂದು ನುಡಿದರು .

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ರುದ್ರಗೌಡ ಬಿರಾದಾರ ಅವರು ಮಾತನಾಡುತ್ತಾ ಸಮರ್ಥನಲ್ಲದ ವೈದ್ಯನಿಂದ ಒಬ್ಬ ರೋಗಿ ಹಾಳಾಗಬಹುದು. ಸಮರ್ಥನಲ್ಲದ ಒಬ್ಬ ಇಂಜಿನಿಯನಿರ್‌ಂದ ಒಂದು ಕಟ್ಟಡ ಹಾಳಾಗಬಹುದು .ಆದರೆ ಸಮರ್ಥ ನಲ್ಲದ ಒಬ್ಬ ಶಿಕ್ಷಕನಿಂದ ಇಡೀ ಭಾರತದ ಭವಿಷ್ಯದ ಪೀಳಿಗೆ ಹಾಳಾಗುತ್ತಾರೆ. ಶಿಕ್ಷಕರ ಕೆಲಸ ಅತ್ಯಂತ ಜವಾಬ್ದಾರಿಯ ಕೆಲಸ ವಾಗಿದೆ. ಗುರುವೇ ಬ್ರಹ್ಮನಾಗಿದ್ದಾನೆ ,ಗುರುವೇ ವಿಷ್ಣು ವಾಗಿದ್ದಾನೆ ,ಗುರುವೇ ಮಹೇಶ್ವರನಾಗಿದ್ದಾನೆ ಗುರು ಸಾಕ್ಷಾತ್ ಪರಬ್ರಹ್ಮನಾಗಿದ್ದಾನೆ. ಗುರುವಿನ ಪಾತ್ರ ಗುರುತರವಾಗಿದೆ ಎಂದರು.

ಕರ್ನಾಟಕ ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕರಾದ ಡಾ. ಸತೀಶ್ ಕುಮಾರ್ ಹೊಸಮನಿ ,ಶರಣಬಸವ ವಿಶ್ವವಿದ್ಯಾಲಯದ ಡೀನರಾದ ಡಾ ಲಕ್ಷ್ಮಿ ಪಾಟೀಲ್ , ಪ್ರಾಚಾರ್ಯರಾದ ರಾಜೇಂದ್ರ ಕೊಂಡ ಮುಖ್ಯ ಅತಿಥಿಗಳಾಗಿ ದ್ದರು .ಶಿಕ್ಷಣ ಇಲಾಖೆಯ ಕಲಬುರ್ಗಿಯ ಕ್ಷೇತ್ರ ಸಮನ್ವಯಾಧಿಕಾ ರಿಗಳಾದ ಡಾ. ಪ್ರಕಾಶ್ ರಾಥೋಡ್ ಪುಸ್ತಕ ಬಿಡುಗಡೆ ಮಾಡಿದರು ಪ್ರಾಚಾರ್ಯರಾದ ಡಾ ಕೆ ಗಿರಿಮಲ್ ಅವರು ಪುಸ್ತಕ ಪರಿಚಯ ಮಾಡಿದರು .

ಪ್ರಾಸ್ತಾವಿಕ ನುಡಿಗಳನ್ನಾಡಿದ ಟ್ರಸ್ಟಿನ ಅಧ್ಯಕ್ಷರಾದ ಶರಣಗೌಡ ಪಾಟೀಲ್ ಪಾಳರವರು ಬಡತನದ ಕಾರಣದಿಂದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬುದು ನಮ್ಮ ಟ್ರಸ್ಟಿನ ಕಾಳಜಿ ಎಂದು ನುಡಿದರು .

ಜಿಲ್ಲಾ ಮಟ್ಟದ 2025 ನೇ ಸಾಲಿನ ಸರ್ವೋತ್ತಮ ಶಿಕ್ಷಕ ಪ್ರಶಸ್ತಿಯನ್ನು

ಡಾ. ಲಕ್ಷ್ಮಿ ಪಾಟೀಲ್ ಮಾಕಾ, ಡಾ. ಕಲ್ಪನಾ ಭೀಮಳ್ಳಿ, ಶ್ರೀ ಗೌಡಪ್ಪಗೌಡ ಮಾಲಿ ಪಾಟೀಲ್, ಸಿದ್ದಣ್ಣ ಬೆನ್ನೂರ, ಲೀಲಾವತಿ ಪಡಶೆಟ್ಟಿ , ಲಕ್ಷ್ಮಿ ವೇಲುಸ್ವಾಮಿ,ಸಂಜೀವ್ ಕುಮಾರ್ ಫಿರಂಗಿ, ಡಾ.ಶುಲಾಭಾಯಿ ಎಚ್. ಕಾಳಮಂದರಗಿ , ಈರನಗೌಡ ಕೆ ಪಾಟೀಲ್, ಶ್ರೀಮತಿ ವಿಜಯಲಕ್ಷ್ಮಿ ರೆಡ್ಡಿ , ಸೋಮಯ್ಯ ಸಿದ್ದಯ್ಯ ಸ್ವಾಮಿ, ದೇವಪ್ಪ ಹಿಪ್ಪರಗಿ , ಶಿವಪ್ರಸಾದ್ ವಿಶ್ವಕರ್ಮ, ಅಬ್ದುಲ್ ಸಾಬ್ ಕೊರಬು ,ಶಾಂತ ಜಿ.ಎನ್. ಬಿರಾದಾರ, ಲಿಂಗಪ್ಪ ಮುಂಗುಂಡಿ ಅವರಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು .

ಬಸವರಾಜ್ ಕೊನೆಕ್ , ದೇವಯ್ಯ ಗುತ್ತೇದಾರ್ ,ಮಲ್ಲಿನಾಥ್ ಶರಣಪ್ಪ ಕೊಳ್ಳುರು ಅವರಿಗೆ ವಿಶೇಷ ಗೌರವ ಸನ್ಮಾನ ಮಾಡಲಾಯಿತು .

ರಾಜ್ಯ ಪತ್ರಾಗಾರ ಇಲಾಖೆಯ ನಿರ್ದೇಶಕರಾದ ಡಾ. ವೀರಶೆಟ್ಟಿ ಗಾರಂಪಳ್ಳಿ ಸ್ವಾಗತಿಸಿದರು .ಡಾ ಆನಂದ ಸಿದ್ದಾಮಣಿ ನಿರೂಪಿಸಿದರು.

ಸೇಡಂನ ಸಿದ್ದಪ್ಪ ತಳ್ಳಳ್ಳಿ ಡಾ. ರಾಮಕೃಷ್ಣ ರೆಡ್ಡಿ , ಸದಾನಂದ ಪೆರ್ಲ ,ಅಶೋಕ್ ಗುರೂಜಿ ,ಎಕೆ ರಾಮೇಶ್ವರ ,ಅಪ್ಪಾರಾವ ಅಕ್ಕೋಣಿ, ಸಾಹಿತಿ ಲಿಂಗಣ್ಣ ಗೋನಾಳ,

ಬಸವಪೂರ್ಣ ಬಿರಾದಾರ್ ,ತನ್ವಿ ಬಿರಾದಾರ ಅಂಬಾರಾಯ ಕೋಣೆ ,ಬಿ ಎಚ್ ನಿರಗುಡಿ ,ಮಹಿಪಾಲ ರೆಡ್ಡಿ ,ಸಿ ಎಸ್ ಪಾಟೀಲ್ ,ಪ್ರಭಾಕರ ಜೋಶಿ , ಎಸ್ ವಡ್ಡನಕೇರಿ ,ಉಪಸ್ಥಿತರಿದ್ದರು

# ಸಾರ್ವಜನಿಕರು ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿವಹಿಸಿ : ಡಾ. ಆರ್. ಅಬ್ದುಲ್ಲಾ



**ಬಳ್ಳಾರಿ,ಅ.20–** ಸಾರ್ವಜನಿಕರು ತಮ್ಮ ಮನೆಯ ಸುತ್ತಮುತ್ತ ನೀರು ನಿಲ್ಲುವುದರಿಂದ ಡೆಂಗ್ಯು ಹರಡುವ ಈಡಿಸ್ ಇಜಿಪ್ಟೋ ಸೊಳ್ಳೆಯ ಸಂತತಿ ಹೆಚ್ಚಾಗುವ ಸಾಧ್ಯತೆ ಇದ್ದು, ಡೆಂಗ್ಯು ಪ್ರಕರಣಗಳು ಹೆಚ್ಚು ಕಂಡು ಬರುವುದರಿಂದ ನೀರು ನಿಲ್ಲದಂತೆ ನೋಡಿಕೊಂಡು ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿವಹಿಸಿವಬೇಕು ಎಂದು ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಹೇಳಿದರು.

ನಗರದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಬ್ರೂಸ್‌ಪೇಟೆ ವ್ಯಾಪ್ತಿಯಲ್ಲಿ ಬರುವ ಕೋಟೆ ಪ್ರದೇಶದ 39ನೇ ವಾರ್ಡಿನಲ್ಲಿ ಡೆಂಗ್ಯೂ ಜ್ವರದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುತ್ತಾ ಮಾತನಾಡಿದರು.

ನೀರು ತುಂಬುವ ಪರಿಕರಣಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸಿ ಮತ್ತು ಯಾರಿಗಾದರೂ ಒಂದೇ ದಿನಕ್ಕಿಂತ ಹೆಚ್ಚು ಬಾರಿ ಜ್ವರ ಕಂಡು ಬಂದರೆ ವೈದ್ಯರ ಬಳಿ ಪರೀಕ್ಷಿಸಿ ಅಗತ್ಯ ಚಿಕಿತ್ಸೆ ಪಡೆಯಬೇಕು. ಅದರಲ್ಲೂ ಚಿಕ್ಕ ಮಕ್ಕಳು, ಗರ್ಭಿಣಿಯರು, ವಯೋವೃದ್ದರ ಕಾಳಜಿ ತೆಗೆದುಕೊಂಡು ನಿರ್ಲಕ್ಷ ವಹಿಸಬೇಡಿ, ವೈದ್ಯರಿಂದ ಪರೀಕ್ಷಿಸಿಕೊಳ್ಳಬೇಕು ಎಂದು ಸಾರ್ವಜನಿಕರಿಗೆ ತಿಳಿಸಿದರು.

ನಿಂತ ನೀರಿನಿಂದ ಸೊಳ್ಳೆ ಉತ್ಪತ್ತಿಯಾಗುವ ಜೊತೆಗೆ ಡೆಂಗ್ಯೂ ಸೇರಿದಂತೆ ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಚಿಕುನ್‌ಗುನ್ಯಾ, ಮಲೇರಿಯಾ, ಆನೇಕಾಲು ರೋಗ, ಮೆದುಳು ಜ್ವರ ಮುಂತಾದವುಗಳು ಕಂಡುಬರುವ ಸಾಧ್ಯತೆ ಇರುತ್ತದೆ. ಸಾಮಾನ್ಯವಾಗಿ ಜ್ವರವನ್ನು ನಾವು ನಿರ್ಲಕ್ಷಿಸುತ್ತೇವೆ, ಇಂತಹ ಸಂದರ್ಭಗಳಲ್ಲಿ ಡೆಂಗ್ಯು ಸಂಬಂಧಿತ ಜ್ವರವಾಗಿದ್ದರೆ ರೋಗಿಯು ಪ್ಲೇಟ್‌ಲೆಟ್ಸ್‌ಗಳ ಶೀಘ್ರ ಕುಸಿಯುವಿಕೆಯಿಂದ ಆರೋಗ್ಯ ಸಮಸ್ಯೆ ಎದುರಾಗಿ ರಕ್ತಸ್ರಾವದಂತಹ ಗಂಭಿರ ಸಮಸ್ಯೆ ಉಂಟಾಗಬಹುದು. ಯಾರಿಗಾದರೂ 3 ದಿನಗಳ ಕಡಿಮೆಯಾಗದ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಂಡಲ್ಲಿ ನಿರ್ಲಕ್ಷಿಸಿದೆ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಬೇಟಿ ನೀಡಿ ಅಗತ್ಯ ಪರೀಕ್ಷೆ ಮಾಡಿಸಿ ವೈದ್ಯರ ಸಲಹೆಯಂತೆ ಲಕ್ಷಣಗಳ ಆಧಾರದ ಮೇರೆಗೆ ಚಿಕಿತ್ಸೆ ಪಡೆಯಲು ತಿಳಿಸಿದರು.

ಡ್ರಮ್, ಬ್ಯಾರಲ್, ನೀರಿನ ತೊಟ್ಟಿ, ಕಲ್ಲಿನ ಡೋಣಿ, ಹೂವಿನ ಕುಂಡಲ ಮುಂತಾದ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಲು ಹಾಗೂ ಮುಚ್ಚಳ ಮುಚ್ಚಿ ಬಟ್ಟೆ ಕಟ್ಟಲು, ಬಳಕೆ ಮಾಡದ ನೀರು ಸಂಗ್ರಹಕಗಳಿಗೆ ಕೊಬ್ಬರಿ ಎಣ್ಣೆಯನ್ನು ಹಾಕುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ 39 ನೇ ವಾರ್ಡಿನ ಕಾರ್ಪೋರೇಟರ್ ಶಶಿಕಲಾ ಜಗನ್ನಾಥ, ಆಡಳಿತ ವೈದ್ಯಾಧಿಕಾರಿ ಡಾ. ಸುರೇಖ, ಎನ್.ವಿ.ಬಿ.ಡಿ.ಸಿಪಿ ಸಲಹೆಗಾರ ಪ್ರತಾಪ್, ಜಿಲ್ಲಾ ನೋಡಲ್ ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ನಂದಿನಿ, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ನಾಗೇಂದ್ರಪ್ಪ, ಆರೋಗ್ಯ ನೀರಿಕ್ಷಣಾಧಿಕಾರಿಗಳಾದ ಮರಿ ಬಸವನಗೌಡ, ರವೀಂದ್ರ ಜಿನಗ, ನಾಗರಾಜ ಸೇರಿದಂತೆ ಬ್ರೂಸ್‌ಪೇಟೆ ಆಸ್ಪತ್ರೆಯ ಸಿಬ್ಬಂದಿಗಳು, ಆಶಾಕಾರ್ಯಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಗೃಹಲಕ್ಷ್ಮೀ ಯೋಜನೆಯ 3ನೇ ಕಂತಿನ ಹಣ ಬಿಡುಗಡೆಗೆ ಕ್ರಮ

**ರಾಯಚೂರು,ಅ.20–** ರಾಜ್ಯ ಸರ್ಕಾರದ ಪ್ರಮುಖ ಯೋಜನೆಯಾದ ಗೃಹಲಕ್ಷ್ಮೀ ಯೋಜನೆಯಡಿಯಲ್ಲಿ 2025-26ನೇ ಸಾಲಿನ ಮೂರನೇ ಕಂತಿನ ಅನುದಾನವು ಜಿಲ್ಲೆಯ 4,28,172 ಫಲಾನುಭವಿಗಳಿಗೆ 85,63,56,000 ರೂ.ಗಳನ್ನು ರಾಯಚೂರಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಇವರ ಮೂಲಕ ಡಿಬಿಟಿ ಪ್ರಕ್ರಿಯೆ ಚಾಲ್ತಿ ಮಾಡಲಾಗಿದ್ದು, ಮುಂದಿನ ಎರಡು ಮೂರು ದಿನಗಳಲ್ಲಿ ಫಲಾನುಭವಿಗಳ ಖಾತೆಗೆ ಹಣ ಜಮಾ ಆಗುತ್ತದೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಚಾರಿ ಆರೋಗ್ಯ ಘಟಕಗಳಿಗೆ ವಾಹನ ಒದಗಿಸಲು ಅರ್ಜಿ ಆಹ್ವಾನ

**ರಾಯಚೂರು,ಅ.20–**ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಸಂಚಾರಿ ಆರೋಗ್ಯ ಘಟಕಗಳಿಗೆ ವಾಹನಗಳನ್ನು ಒದಗಿಸಲು ಅರ್ಹ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಒಟ್ಟು 08 ವಾಹನಗಳನ್ನು ತಾಲೂಕು ಮಟ್ಟದಲ್ಲಿ ಸಂಚಾರಿ ಆರೋಗ್ಯ ತಂಡಗಳಿಗೆ ಸರಬರಾಜು ಮಾಡಬೇಕಾಗಿದ್ದು, 2025ರ ನವಂಬರ್‌ನಿಂದ 2026ರವರೆಗೆ ಸೇವೆಯನ್ನು ಒದಗಿಸಬೇಕಾಗಿದ್ದು, ಆಸಕ್ತ ಸಂಸ್ಥೆಗಳು ವೆಬ್‌ಸೈಟ್ ವಿಳಾಸ: https://kppp.karnataka.gov.in ನಲ್ಲಿ ಅಕ್ಟೋಬರ್ 24ರ ಸಂಜೆ 5.30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಡಿ.ಪಿ.ಎಂ.ಯು ವಿಭಾಗಕ್ಕೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳಾದ ಡಾ.ನಂದಿತಾ ಎಂ.ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಯೋಗಾಲಯ ಪರೀಕ್ಷೆಗಳ ಸೇವೆ ಪಡೆಯಲು ಅರ್ಜಿ ಆಹ್ವಾನ

**ರಾಯಚೂರು,ಅ.20–**ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಎಫ್ 4, ಟಿಎಸ್.ಹೆಚ್ ಮತ್ತು ವಿಟಮಿನ್ ಬಿ 12 ಪ್ರಯೋಗಾಲಯ ಪರೀಕ್ಷೆಗಳ ಸೇವೆ ಪಡೆಯಲು ಅರ್ಹ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ವೆಬ್‌ಸೈಟ್ ವಿಳಾಸ: https://kppp.karnataka.gov.in ನಲ್ಲಿ ಅಕ್ಟೋಬರ್ 24ರ ಸಂಜೆ 5.30ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಡಿ.ಪಿ.ಎಂ.ಯು ವಿಭಾಗಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳಾದ ಡಾ.ನಂದಿತಾ ಎಂ.ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ವಾಲ್ಮೀಕಿರತ್ನ ಪ್ರಶಸ್ತಿ–2025ಗೆ ಮಹೀನ್ ಕುಬೇರ ಆಯ್ಕೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಅ.20–**ತಾಲೂಕಿನ ತಮ್ಮಾಪುರ ಗ್ರಾಮದ ನಿವಾಸಿ ಹಾಗೂ ಚಲನ ಚಿತ್ರನಾಯಕ,ರಂಗಭೂಮಿ ಕಲಾವಿದ,ಹಲವು ಧಾರವಾಹಿಗಳಲ್ಲಿ ಮುಖ್ಯ ಪಾತ್ರಗಳನ್ನು ವಹಿಸಿ ಕಲಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಮಹೀನ್ ಕುಬೇರ ರವರು ಕಲಾಕ್ಷೇತ್ರದಲ್ಲಿ ಸಲ್ಲಿಸಿದ ಸಾಧನೆಗಾಗಿ ಮಹರ್ಷಿ ಶ್ರೀ ವಾಲ್ಮೀಕಿ ಗುರುಕುಲ ಪೀಠ ದೊಡ್ಡಬಳ್ಳಾಪುರ ಹಾಗೂ ಕರ್ನಾಟಕ ವಾಲ್ಮೀಕಿ ನೌಕರರ ಒಕ್ಕೂಟ ವತಿಯಿಂದ ಪ್ರತಿ ವರ್ಷ ನೀಡಲಾಗುವ ಪ್ರತಿಷ್ಠಿತ ಕರ್ನಾಟಕ ವಾಲ್ಮೀಕಿರತ್ನ ಪ್ರಶಸ್ತಿ–2025 ಗೆ ಆಯ್ಕೆಯಾಗಿದ್ದಾರೆ.

ಅ.26 ರಂದು ಮಹರ್ಷಿ ಶ್ರೀ ವಾಲ್ಮೀಕಿ ಗುರುಕುಲ ಪೀಠ ದೊಡ್ಡಬಳ್ಳಾಪುರ ಸಮುದಾಯ ಭಾವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮಹರ್ಷಿ ಶ್ರೀ ವಾಲ್ಮೀಕಿ ಗುರುಕುಲ ಪೀಠದ ಪೀಠಾಧ್ಯಕ್ಷರಾದ ನಾಗಶಕ್ತಿ ಶ್ರೀ ವಾಲ್ಮೀಕಿ ಬ್ರಹ್ಮನಾಂದ ಗುರೂಜಿ ಸಾನಿಧ್ಯವಹಿಸಿ ಪ್ರಶಸ್ತಿಯನ್ನು ವಿತರಿಸಲಿದ್ದಾರೆ ಎಂದು ಕರ್ನಾಟಕ ವಾಲ್ಮೀಕಿ ನೌಕರರ ಒಕ್ಕೂಟದ ರಾಜ್ಯಾಧ್ಯಕ್ಷರಾದ ಪಿ.ಮೋಹನ್ ಕಿಶೋರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
9743497111
9743496111

# ರಕ್ತದಾನಿಗಳಾದ ಸತೀಶ್ ಫರ್ನಾಂಡಿಸ್, ಚಂದ್ರಪ್ಪ, ಬಸವರಾಜಗೆ ವಿಶೇಷ ಸನ್ಮಾನ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.20–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ, ರೆಡ್ ರಿಬ್ಬನ್ ಕ್ಲಬ್‌ಗಳ ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 18ರಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಸಭಾಂಗಣದಲ್ಲಿ, ಅತಿ ಹೆಚ್ಚು ಬಾರಿಗೆ ರಕ್ತದಾನ ಮಾಡಿದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ನಡೆಯಿತು.

70 ಬಾರಿ ರಕ್ತದಾನ ಮಾಡಿದ ಪೋತ್ನಾಳ ಗ್ರಾಮದ ಸತೀಶ್ ಫರ್ನಾಂಡಿಸ್, 50 ಬಾರಿಗೆ ರಕ್ತ ದಾನ ಮಾಡಿದ ರಾಯಚೂರಿನ ಚಂದ್ರಪ್ಪ ಮತ್ತು ಸಿಂಧನೂರಿನ ಬಸವರಾಜ ಹಾಗೂ 3 ಬಾರಿ ರಕ್ತ ದಾನ ಮಾಡಿದ ಕುಮಾರಿ ಮಲ್ಲಿಕಾ ಪೂಜಾರಿ ಅವರಿಗೆ ವಿವಿಧ ಗಣ್ಯರಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮಾತನಾಡಿದ ಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಸಂಕಷ್ಟದ ಸಂದರ್ಭದಲ್ಲಿ ರಕ್ತದಾನ ಮಾಡುವುದು ಅತ್ಯಂತ ಶ್ರೇಷ್ಠ ಕಾರ್ಯವಾಗಿದ್ದು, ಸ್ವಯಂಪ್ರೇರಿತ ರಕ್ತದಾನದ ಮೂಲಕ ಅಮೂಲ್ಯ ಜೀವನ ಉಳಿಸುವ ಪುಣ್ಯದ ಕಾರ್ಯಕ್ಕೆ ಪ್ರತಿಯೊಬ್ಬರೂ ಕೈಜೋಡಿಸಲು ಮುಂದೆ ಬರಬೇಕೆಂದು ಹೇಳಿದರು.

ಅತಿ ಹೆಚ್ಚು ಬಾರಿ ರಕ್ತದಾನ ಮಾಡಿದ ದಾನಿಗಳಲ್ಲಿ ನಮ್ಮ ಜಿಲ್ಲೆಯವರೂ ಇದ್ದಾರೆ. ರಕ್ತದಾನದಿಂದ ಕೆಲವೇ ದಿನಗಳಲ್ಲಿ ಹೊಸ ರಕ್ತ ಉತ್ಪತ್ತಿಯಾಗಿ, ರಕ್ತದೊತ್ತಡ, ಸಕ್ಕರೆ ಕಾಯಿಲೆಯಂತಹ ರೋಗಗಳು ದೂರವಾಗುತ್ತವೆ. ಹೊಸ ಚೈತನ್ಯ, ಉಲ್ಲಾಸ ಕಂಡು ಬರುತ್ತದೆ ಎಂದರು.

ಈ ವೇಳೆ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್ ಅವರು ಮಾತನಾಡಿ, ಈಗಾಗಲೇ ಜಿಲ್ಲೆಯಾದ್ಯಂತ ಸಂಘ–ಸಂಸ್ಥೆಗಳ ಸಹಕಾರದೊಂದಿಗೆ ರಕ್ತದಾನ ಶಿಬಿರಗಳನ್ನು ಏರ್ಪಡಿಸಲಾಗುತ್ತಿದ್ದು, ರಕ್ತಕ್ಕೆ ವರ್ಷವಿಡಿ ನಿರಂತರವಾಗಿ ಬೇಡಿಕೆ ಇರುತ್ತದೆ. ಮುಖ್ಯವಾಗಿ ರಕ್ತಹೀನತೆಯಿಂದ ಬಳಲುವ ಗರ್ಭಿಣಿ ಸ್ತ್ರೀಯರು, ಹೆರಿಗೆ ಸಂದರ್ಭದಲ್ಲಿ, ತುರ್ತು ಶಸ್ತ್ರಚಿಕಿತ್ಸೆಗಳ ಸಂದರ್ಭಗಳಲ್ಲಿ, ಇತ್ತೀಚಿಗೆ ಹೆಚ್ಚಾಗುತ್ತಿರುವ ಅಪಘಾತಗಳು, ಕ್ಯಾನ್ಸರ್ ರೋಗಿಗಿಗಳು, ಥ್ಯಾಲಸೀಮಿಯಾ, ಹಿಮೋಫಿಲಿಯಾ ಮುಂತಾದ ರೋಗಿಗಳು ರಕ್ತದಾನಿಗಳನ್ನೇ ಅವಲಂಬಿಸಿರುತ್ತಾರೆ. ಈ ಎಲ್ಲ ಹಿನ್ನಲೆಯಲ್ಲಿ ಹೆಚ್ಚಿನ ರಕ್ತದ ಅವಶ್ಯಕತೆಯಿದ್ದು, 18 ವರ್ಷ ಮೇಲ್ಪಟ್ಟ ಆರೋಗ್ಯವಂತ ವ್ಯಕ್ತಿಯು ಯಾವುದೇ ಅಳುಕಿಲ್ಲದೆ ರಕ್ತದಾನ ಮಾಡುವಂತೆ ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ಡಾ.ರಾಕೇಶ್, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಡ್ಯಾಪ್ಕೋ ಮೇಲ್ವಿಚಾರಕರಾದ ಮಲ್ಲಯ್ಯ ಮಠಪತಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ನಾಗರಾಜ್, ಸರೋಜಾ.ಕೆ, ಬ್ಲಡ್ ಬ್ಯಾಂಕ್ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಕಾರ್ಯಕ್ರಮದಲ್ಲಿ ಇದ್ದರು.

# ಸಿ.ಐ.ಟಿ.ಯು. ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಅ.20–** ಪಟ್ಟಣದ ತಾಲೂಕ ಪಂಚಾಯತಿ ಸಭಾಂಗಣದಲ್ಲಿ ಸಿ.ಐ.ಟಿ.ಯು. ಸಂಯೋಜಿತ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ 7 ನೇ ತಾಲೂಕ ಸಮ್ಮೇಳನದಲ್ಲಿ ಸಿ.ಐ.ಟಿ.ಯು. ರಾಜ್ಯ ಉಪಾಧ್ಯಕ್ಷ ಆರ್.ಎಸ್.ಬಸವರಾಜ ನೇತೃತ್ವದಲ್ಲಿ ಮುಂದಿನ ದಿನಗಳಲ್ಲಿ ತಾಲೂಕಿನ ಗ್ರಾಮ ಪಂಚಾಯಿತಿ ನೌಕರರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕೈಗೊಳ್ಳಬೇಕಾದ ಹೋರಾಟಗಳ ಬಗ್ಗೆ ಹಾಗೂ ಪ್ರತಿ ಮೂರು ವರ್ಷಕ್ಕೆ ಒಮ್ಮೆ ತಾಲೂಕು ಮಟ್ಟದ ಸಮ್ಮೇಳನವನ್ನು ನಡೆಸುವ ಕುರಿತು ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ಮಾನ್ವಿ ತಾ. ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಿತು. ತಾ.ಗೌರವಾಧ್ಯಕ್ಷರಾಗಿ ಹೆಚ್.ಶರ್ಫುದ್ದೀನ್ ಪೋತ್ನಾಳ, ತಾ.ಅಧ್ಯಕ್ಷರಾಗಿ ಅಂಬಣ್ಣನಾಯಕ ಬ್ಯಾಗವಾಟ್, ಕಾರ್ಯಾಧ್ಯಕ್ಷರಾಗಿ ಮಹ್ಮದ್ ನೀರಮಾನ್ವಿ , ಪ್ರ. ಕಾರ್ಯದರ್ಶಿಯಾಗಿ ಸುಭಾನ್ ಚಿಕ್ಕಕೊಟ್ನೆಕಲ್, ಖಜಾಂಚಿಯಾಗಿ ಚಂದ್ರಶೇಖರ ಕಪಗಲ್, ಉಪಾಧ್ಯಕ್ಷರಾಗಿ ಪ್ರವೀಣಕುಮಾರ ಕಪಗಲ್, ಚಕ್ರಪಾಣಿ ಕರಡಿಗುಡ್ಡ, ವೆಂಕೋಬ ಮದ್ಲಾಪುರು, ವೆಂಕಟೇಶ ಹಿರೇಕೊಟ್ನೆಕಲ್, ಸಹಕಾರ್ಯದರ್ಶಿಗಳಾಗಿ ಯೇಸುರಾಜ್ ಕುರ್ಡಿ, ಹುಚ್ಚಯ್ಯ, ವೆಂಕಟಗಿರಿ ಉಟಕನೂರು, ಸಂಘಟನಾ ಕಾರ್ಯದರ್ಶಿಗಳಾಗಿ ಸಿದ್ದಲಿಂಗಯ್ಯ, ಯಲ್ಲಪ್ಪ ಚೀಕಲಪರ್ವಿ, ಹನುಮಂತ ರಾಯರೆಡ್ಡಿ ಸಾದಾಪುರ ರರವರನ್ನು ಸದಸ್ಯರು ಒಮ್ಮತದಿಂದ ಆಯ್ಕೆ ಮಾಡಿದರು.

# ನರೇಗಾ ಜಾಬ್ ಕಾರ್ಡ್‌ಗೆ ಇ-ಕೆವೈಸಿ ಕಡ್ಡಾಯ: ಅಕ್ಟೋಬರ್ ಅಂತ್ಯದೊಳಗೆ ಅಪ್‌ಡೇಟ್‌ಗೆ ಪಿಡಿಒ ಸೂಚನೆ




ಯುವ ಮಾರ್ಗ ಸುದ್ದಿ

**ರಾಯಚೂರು,ಅ.20–** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಡಿ ನೋಂದಾಯಿತ ಸಕ್ರಿಯ ಜಾಬ್ ಕಾರ್ಡ್ ಹೊಂದಿರುವ ಪ್ರತಿಯೊಬ್ಬರೂ ಇ-ಕೆವೈಸಿ (ಇ-ಏಜಅ) ಅಪ್‌ಡೇಟ್ ಮಾಡಿಸುವುದು ಕಡ್ಡಾಯ ಎಂದು ರಾಯಚೂರು ತಾಲೂಕಿನ ಗಿಲ್ಲೇಸೂಗೂರು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಒ) ಸುದರ್ಶನ್ ಅವರು ತಿಳಿಸಿದ್ದಾರೆ.

ತುಂಗಭದ್ರಾ ಗ್ರಾಮದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಐದು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಆರಂಭಿಸಲಾಗಿರುವ ಈ ಇ-ಕೆವೈಸಿ ಪ್ರಕ್ರಿಯೆಯನ್ನು ಜಿಲ್ಲೆಯಲ್ಲಿ ಕಡ್ಡಾಯಗೊಳಿಸಲಾಗಿದೆ. ನೋಂದಾಯಿತ ಕೂಲಿಕಾರ್ಮಿಕರು ತಮ್ಮ ಆಧಾರ್ ಮೂಲಕ ಮುಖಚಿತ್ರ ಇ-ಕೆವೈಸಿ ಅಪ್‌ಡೇಟ್ ಮಾಡಿಸಬೇಕಾಗಿದೆ.

ಜಾಬ್ ಕಾರ್ಡ್ ಹೊಂದಿರುವ ಎಲ್ಲಾ ನಾಗರಿಕರು ಇದೇ ಅಕ್ಟೋಬರ್ ತಿಂಗಳ ಒಳಗಾಗಿ ತಮ್ಮ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಇ-ಕೆವೈಸಿ ಮಾಡಿಸಿಕೊಳ್ಳಬೇಕು. ಇ-ಕೆವೈಸಿ ಮಾಡಿಸದಿದ್ದರೆ ತಮ್ಮ ಉದ್ಯೋಗ ಚೀಟಿ ರದ್ದಾಗಲಿದ್ದು, ನರೇಗಾ ಸೌಲಭ್ಯಗಳಿಂದ ವಂಚಿತರಾಗುವ ಸಾಧ್ಯತೆ ಇದೆ ಎಂದು ಪಿಡಿಒ ಸುದರ್ಶನ್ ಎಚ್ಚರಿಕೆ ನೀಡಿದರು.

ಇ-ಕೆವೈಸಿ ಪ್ರಕ್ರಿಯೆಯು ಬಹಳ ಸುಲಭವಾಗಿದ್ದು, ಜಾಬ್ ಕಾರ್ಡ್ ಅಥವಾ ಆಧಾರ್ ಕಾರ್ಡ್‌ನೊಂದಿಗೆ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿದರೆ ಬಿಎಫ್‌ಟಿ, ಜಿಕೆಮ್ ಮತ್ತು ಇತರೆ ಸಿಬ್ಬಂದಿ ಸಹಾಯದಿಂದ ಇದನ್ನು ಪೂರ್ಣಗೊಳಿಸಬಹುದು.

ಈ ಸಂದರ್ಭದಲ್ಲಿ ಬಿಎಫ್‌ಟಿ ಇಮಾನುವೇಲ್, ಸದಸ್ಯರಾದ ಹನುಮಂತ, ಮೇಸ್ತ್ರಿಗಳಾದ ಕರಿಯಪ್ಪ, ರಾಮಾಂಜನೇಯ, ಹುಲಿಗೆಪ್ಪ ಮತ್ತು ಊರಿನ ಹಿರಿಯರು ಹಾಗೂ ಕೂಲಿಕಾರ್ಮಿಕರು ಇ-ಕೆವೈಸಿ ಮಾಡಿಸಿಕೊಳ್ಳಲು ಹಾಜರಿದ್ದರು.

## ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಗೆ ಉದ್ಯಮಶೀಲತಾಭಿವೃದ್ಧಿ ತರಬೇತಿಗೆ ಅರ್ಜಿ

**ರಾಯಚೂರು.ಅ.20–** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವಯಂ ಉದ್ಯಮಗಳನ್ನು ಪ್ರಾರಂಭಿಸಲು ಆಸಕ್ತರಿರುವ ರಾಯಚೂರು ಜಿಲ್ಲೆಯ ಪರಿಶಿಷ್ಟ ಜಾತಿಯ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಗೆ ರಾಯಚೂರನಲ್ಲಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮವನ್ನು 2025ರ ಅಕ್ಟೋಬರ್ ಕೊನೆವಾರದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ಈ ಕಾರ್ಯಕ್ರಮದಲ್ಲಿ ಸ್ವಯಂ ಉದ್ಯಮಗಳ ಬಗ್ಗೆ ಮಾಹಿತಿ, ಉದ್ಯಮಶೀಲತೆ, ಯಶಸ್ವಿ ಉದ್ಯಮಶೀಲರ ಗುಣಲಕ್ಷಣಗಳು, ನಾಯಕತ್ವದ ಗುಣಲಕ್ಷಣಗಳು, ಉದ್ಯಮವನ್ನು ಆಯ್ಕೆ ಮಾಡುವ ವಿಧಾನ, ವ್ಯಾಪಾರೋದ್ಯಮಗಳ ಅವಕಾಶಗಳು, ಉದ್ಯಮಗಳನ್ನು ಪ್ರಾರಂಭಿಸುವ ಹಂತಗಳು, ಸ್ವಯಂ ಉದ್ಯೋಗಕ್ಕೆ ಇರುವ ಸರ್ಕಾರದ ಯೋಜನೆಗಳು, ಬ್ಯಾಂಕ್ ವ್ಯವಹಾರ ಮಾಡುವ ಬಗ್ಗೆ, ಸಾಲ ಮತ್ತು ಹಣಕಾಸು ಮತ್ತು ಹಣಕಾಸೇತರ ಸೌಲಭ್ಯಗಳ ಬಗ್ಗೆ, ಲೆಕ್ಕ ಪತ್ರ ನಿರ್ವಹಣೆ, ಯೋಜನಾ ವರದಿ ತಯಾರಿಕೆ, ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವಲ್ಲಿ ಸಹಾಯ ನೀಡುವದು ಹಾಗೂ ಈಗಾಗಲೇ ಸಿಡಾಕ್ ಮುಖಾಂತರ ತರಬೇತಿ ಪಡೆದು ಉದ್ಯಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗುತ್ತಿರುವ ಉದ್ಯಮಶೀಲರ ಅನುಭವ ಹಂಚಿಕೆ ಮತ್ತು ಸಂಬಂಧಪಟ್ಟ ಇತ್ಯಾದಿ ವಿಷಯಗಳ ಬಗ್ಗೆ ಅನುಭವಿ ಅತಿಥಿ ಬೋಧಕರಿಂದ ಉಪನ್ಯಾಸ / ಮಾಹಿತಿ ನೀಡಲಾಗುವದು.

ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವ 20 ರಿಂದ 45 ವರ್ಷದೊಳಗಿನ, ಕನಿಷ್ಠ ಎಸ್ಸೆಸ್ಸೆಲ್ಸಿ ಪಾಸ್/ಫೇಲ್ ಆದ ಪರಿಶಿಷ್ಟ ಜಾತಿಯ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು ಜಂಟಿ ನಿರ್ದೇಶಕರು, ಸಿಡಾಕ್, ಕಟ್ಟಡಸಂಖ್ಯೆ : 1-4-156(ಹಳೆಯ) 1-4-805(ಹೊಸ), ನಂದೀಶ್ವರ ಗುಡಿ ಹತ್ತಿರ, ನವೀನ್ ಹಾಸ್ಪಿಟಲ್ ಪಕ್ಕದಲ್ಲಿ, ಐ ಬಿರಸ್ತೆ, ರಾಯಚೂರು -584103 ಮೊಬೈಲ್ ಸಂಖ್ಯೆ 9986600631 ಇಲ್ಲಿಗೆ ಕರೆ ಮಾಡಿ ಅಕ್ಟೋಬರ್ 25 ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಸಿಡಾಕ್‌ನ ಜಂಟಿ ನಿರ್ದೇಶಕರಾದ ಶ್ರೀ ಜಿ. ಯು. ಹುಡೇದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರವಾರ: ಸಾಮಾಜಿಕ, ಶೈಕ್ಷಣಿಕ ಜಾತಿ ಸಮೀಕ್ಷೆ ಶೇ 91 ಪೂರ್ಣ :ಅಶೋಕ ಪವಾರ್



**ಸಿರವಾರ,ಅ.20–**ಸಿರವಾರ ತಾಲೂಕಿನಾದ್ಯಂತ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಯುತ್ತಿರುವ ಸಾಮಾಜಿಕ, ಶೈಕ್ಷಣಿಕ ಜಾತಿ ಸಮೀಕ್ಷೆ 2025 ಗಣತಿ ಕಾರ್ಯ ನಡೆಸಲಾಗಿದ್ದು ಕೊನೆಯ ದಿನವಾದ ಭಾನುವಾರ ಶೇ 91 ರಷ್ಟು ಪೂರ್ಣಗೊಂಡಿದೆ ಎಂದು ಸಿರವಾರ ತಹಸೀಲ್ದಾರ್ ಅಶೋಕ ಪವಾರ್ ಅವರು ಮಾಹಿತಿ ನೀಡಿದರು.

ಪಕ್ಕದ ಅರಕೇರಾ ತಾಲೂಕು ಶೇ 97 ರಷ್ಟು ಸಮೀಕ್ಷೆ ಪೂರ್ಣಗೊಂಡಿರುವ ಮಾಹಿತಿ ಬಂದಿದೆ ಒಟ್ಟಾರೆ ರಾಯಚೂರು ಜಿಲ್ಲೆಯಲ್ಲಿ ಶೇ 91 ರಷ್ಟು ಸಮೀಕ್ಷೆ ಪೂರ್ಣಗೊಂಡಿದ್ದು ಉಳಿದ 9-10 ರಷ್ಟು ಜನರು ಬೆಂಗಳೂರಿಗೆ ಗೂಳೆ ಹೋಗಿದ್ದಾರೆ ಎಂದು ತಿಳಿದುಬಂದಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳ ಸೂಚನೆಯಂತೆ ಸಮೀಕ್ಷಗೆ ಒಳಪಡಿಸಿದ ಶಿಕ್ಷಕರನ್ನು ಇಂದು ಬಿಡುಗಡೆ ಮಾಡಲು ಸೂಚಿಸಲಾಗಿದೆ ಎಂದು ತಿಳಿಸಿದರು.

## ಕಲ್ಮಠ ಶ್ರೀಗಳಿಂದ ಮಾಜಿ ಸಚಿವ ಕೆ.ಶಿವನಗೌಡ ನಾಯಕ ರವರಿಗೆ ಗುರುರಕ್ಷೆ



**ಮಾನ್ವಿ,ಅ.20–** ಪಟ್ಟಣದ ಕಲ್ಮಠಕ್ಕೆ ದಿಪಾವಳಿ ಅಂಗವಾಗಿ ಮಾಜಿ ಸಚಿವ ಕೆ.ಶಿವನಗೌಡ ನಾಯಕ ಭೇಟಿ ನೀಡಿ ಶಾಂಭವಿ ಮಾತೆಯ ಮೂರ್ತಿಗೆ ವಿಶೇಷವಾದ ಪೂಜೆಯನ್ನು ಸಲ್ಲಿಸಿದರು ನಂತರ ಕಲ್ಮಠದ ಶ್ರೀವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಮಾಜಿ ಸಚಿವ ಕೆ.ಶಿವನಗೌಡ ನಾಯಕ ರವರಿಗೆ ಶ್ರೀ ಮಠದ ವತಿಯಿಂದ ಗೌರವ ರಕ್ಷೆ ನೀಡಿ ಸನ್ಮಾನಿಸಿ ಗೌರವಿಸಿದರು.

ಬಿಜೆಪಿ ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವತಿ, ಟಿ.ಎ.ಪಿ.ಸಿ.ಎಂ.ಎಸ್.ಸಿ, ಅಧ್ಯಕ್ಷರಾದ ತಿಮ್ಮಾರೆಡ್ಡಿಗೌಡ ಭೋಗಾವತಿ, ಮುಖಂಡರಾದ ಜಂಬಣ್ಣ ನೀಲಗಲ್, ಮಲ್ಲಿಕಾರ್ಜುನ ಜಕ್ಕಲದಿನ್ನಿ, ಕೆ.ನಾಗಲಿಂಗಸ್ವಾಮಿ, ಸೀಕಲ್ ಉಮಾಕಾಂತ ಸಾಹುಕಾರ, ವೀರೇಶ ನಾಯಕ ಬೆಟ್ಟದೂರು, ಶರಣಬಸವ ನಾಯಕ ಜಾನೇಕಲ್, ನವೀನ್ ಕುಮಾರ್, ಚಂದ್ರು ನಾಯಕ, ಸಾಹಿತಿಗಳಾದ ರಮೇಶ್ ಯಾಳಗಿ ಸೇರಿದಂತೆ ಇನ್ನಿತರರು ಇದ್ದರು

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H